ಸಂಪುಟ: 06 ಸಂಚಿಕೆ: 151 ಪುಟಗಳು: 08 ಗುರುವಾರ 13 ಆಗಸ್ಟ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಪ್ರತಿ ದಿನವನ್ನು ಹೊಸ ದಿನವೆಂದು ಪ್ರಾರಂಭಿಸಿ. ಹಳೆಯ ಕೆಟ್ಟ ಘಟನೆಗೆ ಕೊರಗದೆ, ಒಳ್ಳೆಯ ಘಟನೆಗೆ ಅಹಂಕಾರ ಪಡದೆ ಪ್ರತಿದಿನವನ್ನು ಹೊಸ ದಿನವಾಗಿ ಪ್ರಾರಂಭಿಸಿ. ಹೊಸಹೊಸ ಸಂಗತಿಗಳ ಮಜಾ ಅನುಭವಿಸುತ್ತಾ ಹ್ಯಾಪಿಯಾಗಿರಿ...

# ನೂತನ ಸಚಿವರಿಗೆ ಖಾತೆ ಭಾಗ್ಯ



ಬೆಳಗಾವಿ ಜಿಲ್ಲೆಯ ಅಥಣಿ ಕ್ಷೇತ್ರ ಶಾಸಕರು ಲಕ್ಷ್ಮಣ ಸವದಿ ಖಾತೆ ಸಹಕಾರ



ರಾಮಲಿಂಗಾರೆಡ್ಡಿ ಬೆಂಗಳೂರು ಶಾಸಕರು ಖಾತೆ ಅರಣ್ಯ, ಭೂವಿಜ್ಞಾನ ಪರಿಸರ



ಚಾಮರಾಜಪೇಟೆ ಕ್ಷೇತ್ರ ಶಾಸಕ ಜಮೀರ್ ಅಹ್ಮದ್ ಖಾತೆ ವಕ್ಫ್ ವಸತಿ



ರುದ್ರಪ್ಪ ಲಮಾಣಿ ಹಾವೇರಿ ವಿಧಾನಸಭಾ ಕ್ಷೇತ್ರ ಶಾಸಕರು ಖಾತೆ ಸಕ್ಕರೆ, ಜವಳಿ



ಕೆ.ಹೆಚ್.ಮುನಿಯಪ್ಪ ದೇವನಹಳ್ಳಿ ವಿಧಾನಸಭಾ ಕ್ಷೇತ್ರ ಶಾಸಕ ಖಾತೆ ಸಮಾಜ ಕಲ್ಯಾಣ



ಶಿವರಾಜ್ ತಂಗಡಗಿ ಕನಕಗಿರಿ ವಿಧಾನಸಭಾ ಕ್ಷೇತ್ರ ಶಾಸಕ ಖಾತೆ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಸಂಸ್ಕೃತಿ



ಯು.ಟಿ.ಖಾದರ್ ಮಂಗಳೂರು (ಉಳ್ಳಾಲ) ವಿಧಾನಸಭಾ ಕ್ಷೇತ್ರ ಶಾಸಕ ಖಾತೆ ಹಿಂದುಳಿದ ವರ್ಗಗಳ ಕಲ್ಯಾ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ವಕ್ಫ್, ಆರೋಗ್ಯ ಕುಟುಂಬ ಕಲ್ಯಾಣ



ಟಿ.ರಘುಮೂರ್ತಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ಶಾಸಕ ಖಾತೆ ಎಸ್‌ಟಿ ಕಲ್ಯಾಣ



ಅಜಯ್ ಸಿಂಗ್ ಜೇವರ್ಗಿ ವಿಧಾನಸಭಾ ಕ್ಷೇತ್ರ ಶಾಸಕ ಖಾತೆ ಸಣ್ಣ ನೀರಾವರಿ, ವಿಜ್ಞಾನ ತಂತ್ರಜ್ಞಾನ



ಎನ್.ಚಲುವರಾಯಸ್ವಾಮಿ ನಾಗಮಂಗಲ ವಿಧಾನಸಭಾ ಕ್ಷೇತ್ರ ಶಾಸಕ ಖಾತೆ ಜಲಸಂಪನ್ಮೂಲ



ಮಧು ಬಂಗಾರಪ್ಪ ಸೊರಬ ವಿಧಾನಸಭಾ ಕ್ಷೇತ್ರ ಶಾಸಕ ಖಾತೆ ಪ್ರಾಥಮಿಕ ಪ್ರೌಢಶಿಕ್ಷಣ

## ಸಿಎಂ ಬಳಿಯೇ ಇವೆ 8ಕ್ಕೂ ಹೆಚ್ಚು ಖಾತೆಗಳು




• ಉದಯವಾಹಿನಿ, ಬೆಂಗಳೂರು

ತೀವ್ರ ಕುತೂಹಲ ಮೂಡಿಸಿರುವ ನೂತನ ಸಚಿವರಿಗೆ ಖಾತೆ ಹಂಚಿಕೆ ಗೊಂದಲ ಕೊನೆಗೂ ಬಗೆಹರಿದಿದೆ. ಎರಡನೇ ಹಂತದ ಸಂಪುಟ ಪುನಾರಚನೆಯಲ್ಲಿ ಡಿಕೆ ಶಿವಕುಮಾರ್ ಕ್ಯಾಬಿನೆಟ್ ಸೇರಿದ ನೂತನ ಸಚಿವರಿಗೆ ಖಾತೆಗಳನ್ನು ಹಂಚಿಕೆ ಮಾಡಲಾಗಿದೆ. ಹೌದು. ಆಗಸ್ಟ್ 3ರಂದು ಸಂಪುಟ ಪುನಾರಚನೆ ವೇಳೆ ಪ್ರಮಾಣವಚನ ಸ್ವೀಕರಿಸಿದ 19 ನೂತನ ಸಚಿವರಿಗೆ ಖಾತೆ ನೀಡಬೇಕೆಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಪಟ್ಟಿಯನ್ನು ಅಂತಿಮಗೊಳಿಸಿದ್ದು, ರಾಜಭವನದ ಅಂಕಿತ ಹಾಗೂ ಸರ್ಕಾರದ ಅಧಿಕೃತ ಗೆಜೆಟ್ ಅಧಿಸೂಚನೆ ಹೊರಡಿಸಲಾಗಿದೆ. ಆದ್ರೆ, ಇದರಲ್ಲಿ ಕೆಲ ಮಹತ್ವ ಬದಲಾವಣೆ ಮಾಡಲಾಗಿದೆ. ರಾಮಲಿಂಗಾರೆಡ್ಡಿ ಹಾಗೂ ಮುನಿಯಪ್ಪನವರ ಖಾತೆಗಳನ್ನ ಬದಲಾವಣೆ ಮಾಡಲಾಗಿದೆ. ಖಾತೆ ಹಂಚಿಕೆಗಾಗಿ ಸಚಿವ ಆಕಾಂಕ್ಷಿಗಳು ಹಾಗೂ ಹಿರಿಯ ನಾಯಕರು ನಡೆಸುತ್ತಿದ್ದ ಕಸರತ್ತು, ದೆಹಲಿ ಮಟ್ಟದ ಸಭೆಗಳು ಹಾಗೂ ಮುಖ್ಯಮಂತ್ರಿಗಳ ಜೊತೆಗಿನ ಸುದೀರ್ಘ ಚರ್ಚೆಗಳ ನಂತರ ಅಂತಿಮ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಪ್ರಮುಖ ಇಲಾಖೆಗಳಿಗೆ ಅನುಭವ ಹಾಗೂ ಪ್ರಾದೇಶಿಕ ಸಮತೋಲನವನ್ನು ಆಧರಿಸಿ ನಾಯಕರಿಗೆ ಜವಾಬ್ದಾರಿ ನೀಡಲಾಗಿದ್ದು, ಕೆಲ ಸಚಿವರ ಖಾತೆಗಳನ್ನೂ ಸಹ ಬದಲಾವಣೆ ಮಾಡಲಾಗಿದೆ.

ಪ್ರಮುಖವಾಗಿ ಮೊದಲ ಹಂತದಲ್ಲೇ ಸಚಿವರಾಗಿದ್ದ ಮುನಿಯಪ್ಪ ಹಾಗೂ ರಾಮಲಿಂಗಾರೆಡ್ಡಿ ಅವರು ಖಾತೆ ಬಗ್ಗೆ ಅಸಮಾಧಾನಗೊಂಡಿದ್ದರು. ಆಹಾರ ಇಲಾಖೆ ಕೊಟ್ಟಿದ್ದಕ್ಕೆ ಬೇಸರಗೊಂಡಿದ್ದ ಮುನಿಯಪ್ಪ ಅವರು ಖುದ್ದು ರಾಹುಲ್ ಗಾಂಧಿ ಭೇಟಿ ಮಾಡಿ ಖಾತೆ ಬದಲಾವಣೆಗೆ ಮನವಿ ಮಾಡಿದ್ದರು. ಇನ್ನು ಜಲಸಂಪನ್ಮೂಲ ಖಾತೆ ನೀಡಿದ್ದಕ್ಕೆ ಅಸಮಾಧಾನಗೊಂಡಿದ್ದ ರಾಮಲಿಂಗಾರೆಡ್ಡಿ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಹಂತಕ್ಕೆ ಹೋಗಿದ್ದರು.

ಆದ್ರೆ, ಇದೀಗ ಇವರಿಬ್ಬರ ಖಾತೆ ಬದಲಾವಣೆ ಮಾಡಲಾಗಿದ್ದು, ಮುನಿಯಪ್ಪ ಅವರಿಗೆ ಆಹಾರ ಸರಬರಾಜು ಬದಲಿಗೆ ಸಮಾಜ ಕಲ್ಯಾಣ ಇಲಾಖೆ ಜವಾಬ್ದಾರಿ ನೀಡಿದ್ದರೆ, ಇನ್ನು ಹಿರಿಯ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಜಲಸಂಪನ್ಮೂಲ ಬದಲಿಗೆ ಅರಣ್ಯ ಖಾತೆ ನೀಡಲಾಗಿದೆ. ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ಸಚಿವರಾಗಿ ನಿಭಾಯಿಸಿದ್ದ ಖಾತೆಗಳ ಜವಾಬ್ದಾರಿ ನೀಡಲಾಗಿದೆ.

## ರಾಹುಲ್ ಭೇಟಿಯಾಗಿದ್ದ ಮುನಿಯಪ್ಪ

ತಾಳ್ಮೆಯಿಂದ ಇರಿ ಎನ್ನುವ ಮಾತನ್ನು ಆ ಸಂದರ್ಭದಲ್ಲಿ ರಾಹುಲ್ ಗಾಂಧಿ ಹೇಳಿದ್ದರು. ಇದಾದ ನಂತರ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನೂ ಭೇಟಿಯಾಗಿದ್ದ ಮುನಿಯಪ್ಪನವರಿಗೆ ಕೊನೆಗೂ ತಾವು ಬಯಸಿದ ಖಾತೆಯನ್ನು ಕಾಂಗ್ರೆಸ್ ಹೈಕಮಾಂಡ್ ನೀಡಿದೆ. ಈಗ ಆಗಿರುವ ಖಾತೆ ಹಂಚಿಕೆಯಲ್ಲಿ ಮುನಿಯಪ್ಪನವರಿಗೆ ಸಮಾಜ ಕಲ್ಯಾಣ ಇಲಾಖೆಯನ್ನು ನೀಡಲಾಗಿದೆ. ಅವರು ನಿಭಾಯಿಸುತ್ತಿದ್ದ ಆಹಾರ ಮತ್ತು ನಾಗರಿಕ ಸರಬರಾಜು ಖಾತೆಯನ್ನು ಬೆಂಗಳೂರು ಶಿವಾಜಿ ನಗರ ಶಾಸಕ ರಿಜ್ವಾನ್ ಅರ್ಷದ್ ಅವರಿಗೆ ನೀಡಲಾಗಿದೆ.

## ಚೆಲುವರಾಯಸ್ವಾಮಿಗೆ ನಿರ್ಣಾಯಕ ಜಲಸಂಪನ್ಮೂಲ ಖಾತೆ

ಇನ್ನು, ಸಿದ್ದರಾಮಯ್ಯನವರ ಸರ್ಕಾರದಲ್ಲಿ ಕೃಷಿ ಸಚಿವರಾಗಿದ್ದ ಎನ್.ಚೆಲುವರಾಯಸ್ವಾಮಿ ಅವರಿಗೆ ಜಲಸಂಪನ್ಮೂಲ ಖಾತೆಯನ್ನು ನೀಡಲಾಗಿದೆ.

ಸದ್ಯದ, ಕಾವೇರಿ, ಮೇಕೆದಾಟು ಬಿಕ್ಕಟ್ಟಿನ ಸಂದರ್ಭದಲ್ಲಿ ಈ ಖಾತೆ, ಭಾರೀ ಮಹತ್ವವನ್ನು ಪಡೆದುಕೊಂಡಿದೆ. ಜಮೀರ್ ಅಹ್ಮದ್ ಖಾನ್ ಅವರಿಂದ, ಅಲ್ಪಸಂಖ್ಯಾತ ಮತ್ತು ವಕ್ಫ್ ಖಾತೆಯನ್ನು ವಾಪಸ್ ಪಡೆಯಲಾಗಿದೆ. ಆರೋಗ್ಯ ಇಲಾಖೆಯ ಸಚಿವ ಯುಟಿ ಖಾದರ್ ಅವರಿಗೆ ಹೆಚ್ಚುವರಿಯಾಗಿ ಈ ಖಾತೆಯನ್ನು ನೀಡಲಾಗಿದೆ.



ಕೊಪ್ಪಳ ಜಿಲ್ಲೆಯ ಯಲಬುರ್ಗಾ ಕ್ಷೇತ್ರ ಶಾಸಕರು ಬಸವರಾಜ ರಾಯರೆಡ್ಡಿ ಖಾತೆ ಉನ್ನತ ಶಿಕ್ಷಣ



ಶಿವಲಿಂಗೇಗೌಡ ಅರಸೀಕೆರೆ ವಿಧಾನಸಭಾ ಕ್ಷೇತ್ರ ಶಾಸಕರು ಶಾಸಕರು ಖಾತೆ ಅಬಕಾರಿ



ಪುಟ್ಟರಂಗಶೆಟ್ಟಿ ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕರು ಖಾತೆ ಪಶುಸಂಗೋಪನೆ



ವಿಜಯಾನಂದ ಕಾಶಪ್ಪನವರ್ ಹುನಗುಂದ ಕ್ಷೇತ್ರಶಾಸಕರು ಖಾತೆ ಸಣ್ಣ ಕೈಗಾರಿಕೆ, ಸಾರ್ವಜನಿಕ ಉದ್ಯಮ



ಧಾರವಾಡ ಜಿಲ್ಲೆ ಕಲಘಟಗಿ ಕ್ಷೇತ್ರಶಾಸಕರು ಸಂತೋಷ್ ಲಾಡ್ ಖಾತೆ ಕಾರ್ಮಿಕ



ದಾವಣಗೆರೆ ಜಿಲ್ಲೆಯ ಮಾಯಕೊಂಡ ಕ್ಷೇತ್ರಶಾಸಕರು ಕೆ.ಎಸ್.ಬಸವಂತಪ್ಪ ಖಾತೆ ಮುಜರಾಯಿ, ಮೀನುಗಾರಿಕೆ, ಒಳನಾಡು, ಬಂದರು



ಬಳ್ಳಾರಿ ಮತ್ತು ಕೂಡ್ಲಿಗಿ ಕ್ಷೇತ್ರಶಾಸಕರು ಬಿ.ನಾಗೇಂದ್ರ ಖಾತೆ ಸಾಂಖ್ಯಿಕ ಇಲಾಖೆ



ದಾವಣಗೆರೆ ಉತ್ತರ ಕ್ಷೇತ್ರಶಾಸಕರು ಎಸ್.ಎಸ್.ಮಲ್ಲಿಕಾರ್ಜುನ್ ಖಾತೆ ಗಣಿ ಭೂವಿಜ್ಞಾನ, ತೋಟಗಾರಿಕೆ



ಶಿವಾಜಿನಗರ (ಬೆಂಗಳೂರು) ಕ್ಷೇತ್ರಶಾಸಕರು ರಿಜ್ವಾನ್ ಅರ್ಷದ್ ಖಾತೆ ಆಹಾರ ನಾಗರಿಕ ಸರಬರಾಜು



ಮಳವಳ್ಳಿ ಕ್ಷೇತ್ರಶಾಸಕರು ನರೇಂದ್ರ ಸ್ವಾಮಿ ಖಾತೆ ಕೃಷಿ



ಮಾಗಡಿ, ರಾಮನಗರ ಜಿಲ್ಲೆ ಕ್ಷೇತ್ರಶಾಸಕರು ಹೆಚ್.ಸಿ.ಬಾಲಕೃಷ್ಣ ಖಾತೆ ಪುರಸಭೆ ಆಡಳಿತ

## ಕೊನೆಗೂ ಖಾತೆ ಬದಲಾವಣೆಯ ಹಠದಲ್ಲಿ ಗೆದ್ದ ಮುನಿಯಪ್ಪ

## ಆಫ್ ರೋಡ್ ಸಾಹಸ; ಜಲಮೂಲ, ಗ್ರಾಮೀಣ ರಸ್ತೆ ಹಾಳಾದರೆ ಕ್ರಮ: ಈಶ್ವರ ಖಂಡ್ರೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಸಾಹಸಿಗರ ಸಂಸ್ಥೆಯೊಂದು ಆ.15, 16ರಂದು ಕುದುರೆಮುಖದಲ್ಲಿ ಆಫ್ ರೋಡ್ ಸಾಹಸ ಆಯೋಜಿಸಿದ್ದು, ಇದರಿಂದ ಜಲಮೂಲ ಕಲುಷಿತವಾದರೆ ಮತ್ತು ಗ್ರಾಮೀಣ ರಸ್ತೆ ನಾಶವಾದರೆ ಕಠಿಣ ಕ್ರಮ ಜರುಗಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ಆ.15, 16ರಂದು ಚಿಕ್ಕಮಗಳೂರು ಜಿಲ್ಲೆ ಕುದುರೆಮುಖದಲ್ಲಿ ಆಫ್ ರೋಡ್ ಅಡ್ವೆಂಚರ್ ನಡೆಸುತ್ತಿರುವುದಾಗಿ ಬೆಂಗಳೂರಿನ ಒಂದು ಸಂಸ್ಥೆ ಪ್ರಚಾರ ಮಾಡಿದ್ದು, ಈ ಆಫ್ -ರೋಡ್‌ನಲ್ಲಿ ನದಿಗಳನ್ನು ದಾಟುವ, ಮಣ್ಣು ದಾರಿಯಲ್ಲಿ ಸಾಗುವ, ಬೆಟ್ಟ ಗುಡ್ಡ ಹತ್ತಿ ಇಳಿಯುವ ಸಾಹಸದ ಅವಕಾಶವಿದೆ ಎಂದು ಹೇಳಿಕೊಂಡಿದೆ. ಇದರಿಂದ ರಸ್ತೆಗಳು ಹಾಳಾಗದಂತೆ ಕ್ರಮ ವಹಿಸಲು ಸೂಚಿಸಿದ್ದಾರೆ. ದೇಶದ ಪವಿತ್ರ ಸಂವಿಧಾನ ವಿಧಿ 51ಎ(ಜಿ)ರಲ್ಲಿರುವ 'ಭಾರತದ ಪ್ರಜೆಯಾಗಿ ನಾನು ಅರಣ್ಯ, ಸರೋವರ, ನದಿ, ವನ್ಯಜೀವಿಗಳು ಸೇರಿದಂತೆ ನೈಸರ್ಗಿಕ ಪರಿಸರವನ್ನು ರಕ್ಷಿಸುತ್ತೇನೆ ಮತ್ತು ಸುಧಾರಿಸುತ್ತೇನೆ.

ಭಾರತದ ಸಂವಿಧಾನದ ಆಶಯದಂತೆ ನಾನು ಜೀವಂತ ಜೀವಿಗಳ ಬಗ್ಗೆ ಸಹಾನುಭೂತಿ ಹೊಂದಿರುತ್ತೇನೆ' ಎಂಬ ಅಂಶವನ್ನು ಉಲ್ಲೇಖಿಸಿ, ನದಿ, ಪರಿಸರ ರಕ್ಷಣೆ ಪ್ರತಿಯೊಬ್ಬರ ಹೊಣೆ ಎಂದು ತಿಳಿಸಿದ್ದಾರೆ. ಈ ಸಾಹಸದಲ್ಲಿ ಬಳಸಲಾಗುವ ವಾಹನಗಳಿಗೆ ಪರಿವರ್ತಿತ (ಮಾಡಿಫೈಡ್) ದಪ್ಪ ಟೈರ್‌ಗಳನ್ನು ಹಾಕುವ ಕಾರಣ ಮತ್ತು ಆ ವಾಹನಗಳು ಮಳೆಯಿಂದ ತೊಯ್ದ ರಸ್ತೆಯಲ್ಲಿ ಅತಿ ರಭಸದಿಂದ ಸಾಗುವ ಕಾರಣ ಗ್ರಾಮೀಣ ರಸ್ತೆಗಳು ಹಾಳಾಗುವ ಅಪಾಯ ಇರುವುದಲ್ಲದೆ, ಬೆಟ್ಟ ಗುಡ್ಡಗಳ ಮೇಲಿನ ಮೇಲ್ಮೈ ಪದರ ಸವಕಳಿಯಾಗಿ ಮಳೆ ಬಂದಾಗ ಕೊಚ್ಚಿಕೊಂಡು ಬಂದು ಕೆರೆ, ಕಟ್ಟೆ, ಸರೋವರ ಇತ್ಯಾದಿ ಜಲ ಮೂಲಗಳಲ್ಲಿ ಹೂಳು ಹೆಚ್ಚಾಗಿ ನೀರಿನ ಸಂಗ್ರಹಣಾ ಸಾಮರ್ಥ್ಯ ಕಡಿಮೆಯಾಗುತ್ತದೆ ಎಂದೂ ತಿಳಿಸಿದ್ದಾರೆ.

## ಬೆಂಗಳೂರಿನಲ್ಲಿ 400ಕ್ಕೂ ಅಧಿಕ ಇವಿ ದ್ವಿಚಕ್ರ ವಾಹನಗಳು ಬೆಂಕಿಗಾಹುತಿ: ದುಷ್ಕೃತ್ಯದ ಶಂಕೆ

• ಉದಯವಾಹಿನಿ, ಬೆಂಗಳೂರು

ಕೆ.ಆರ್. ಪುರದ ಎನ್‌ಆರ್‌ಐ ಲೇಔಟ್‌ನಲ್ಲಿ ನಡೆದ ಬೆಂಕಿ ಅವಘಡದಲ್ಲಿ ಝೆಪ್ಟೋ, ಸ್ವಿಗ್ಗಿ ಹಾಗೂ ಝೊಮ್ಯಾಟೊ ಸಂಸ್ಥೆಗಳ ಡೆಲಿವರಿ ಸಿಬ್ಬಂದಿಗೆ ದಿನಬಾಡಿಗೆ ಆಧಾರದ ಮೇಲೆ ನೀಡಲಾಗುತ್ತಿದ್ದ 400ಕ್ಕೂ ಹೆಚ್ಚು ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳು ಸಂಪೂರ್ಣವಾಗಿ ಭಸ್ಮವಾಗಿವೆ. ಸಂಜೆ 7 ಗಂಟೆಗೆ ವಾಹನಗಳಿದ್ದ ಆವರಣದ ಗೇಟ್ ಲಾಕ್ ಮಾಡಿದ ಕೆಲವೇ ಕ್ಷಣಗಳಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಪಾರ್ಕಿಂಗ್‌ಗೆ ತಂದಿದ್ದ ಮತ್ತು ಸರ್ವೀಸ್‌ಗಾಗಿ ಕಾಯ್ದಿರಿಸಲಾಗಿದ್ದ ಸುಮಾರು 400ಕ್ಕೂ ಅಧಿಕ ವಾಹನಗಳು ಬೆಂಕಿಯ ಜ್ವಾಲೆಗೆ ಸಿಲುಕಿ ನಾಶವಾಗಿವೆ.

ಇವಿಸ್‌ಕಂಪನಿಯ ಅಡ್ಮಿನ್ ಹರೀಶ್ ಪ್ರತಿಕ್ರಿಯಿಸಿ, ಸಂಜೆ 7 ಗಂಟೆಯ ಸುಮಾರಿಗೆ ಜಾಗದ ಮಾಲೀಕರು ಫೋನ್ ಮಾಡಿ ಬೆಂಕಿ ಹೊತ್ತಿಕೊಂಡಿರುವ ವಿಚಾರ ತಿಳಿಸಿದಾಗಷ್ಟೇ ನಮಗೆ ವಿಷಯ ಗೊತ್ತಾಯಿತು. ಇದುವರೆಗೆ ಈ ರೀತಿಯ ಘಟನೆ ಎಂದೂ ನಡೆದಿರಲಿಲ್ಲ. ಯಾರೋ ಬೇಕೆಂದೇ ಕಿಡಿಗೇಡಿತನದಿಂದ ಈ ಕೃತ್ಯ ಎಸಗಿದ್ದಾರೆ ಎಂಬ ಅನುಮಾನ ನಮಗಿದೆ ಎಂದು ಶಂಕೆ ವ್ಯಕ್ತಪಡಿಸಿದ್ದಾರೆ.

## ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಆತ್ಮಚರಿತ್ರೆ ಬಿಡುಗಡೆ ಮಾಡಿದ ಪ್ರಧಾನಿ

• ಉದಯವಾಹಿನಿ, ನವದೆಹಲಿ

ವಿಜ್ಞಾನ ಭವನದಲ್ಲಿ ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರ ಆತ್ಮಚರಿತ್ರೆ ಪುಸ್ತಕವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಬುಧವಾರ ಬಿಡುಗಡೆ ಮಾಡಿದರು. ಟ್ರಯಂಫ್ ಆಫ್ ದಿ ಇಂಡಿಯನ್ ರಿಪಬ್ಲಿಕ್ ಮೈ ಲೈಫ್, ಮೈ ಸ್ಟ್ರಗಲ್ಸ್' ಎಂಬ ಶೀರ್ಷಿಕೆಯೊಂದಿಗೆ ಈ ಪುಸ್ತಕವನ್ನು ಹೊರ ತರಲಾಗಿದೆ. ಪುಸ್ತಕ ಅನಾವರಣಗೊಳಿಸಿದ ಬಳಿಕ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ಆತ್ಮಚರಿತ್ರೆಯು ರಾಮ್ ನಾಥ್ ಕೋವಿಂದ್ ಅವರ ಜೀವನ ಪ್ರಯಾಣವನ್ನು ದೇಶದ ಜನರ ಮುಂದಿಟ್ಟಿದೆ. ಅವರ ವೈಯಕ್ತಿಕ ಜೀವನ, ಬೆಳವಣಿಗೆ ಹಾಗೂ ಸಾಧನೆಗಳನ್ನು ತಿಳಿಸುತ್ತದೆ ಎಂದು ಹೇಳಿದ್ದಾರೆ.

ಅವರ ಬಾಲ್ಯದ ಆರಂಭಿಕ ದಿನಗಳಿಂದ ಹಿಡಿದು, ಸಾರ್ವಜನಿಕ ಜೀವನ ಮತ್ತು ಭಾರತದ 14 ನೇ ರಾಷ್ಟ್ರಪತಿಯಾಗಿ ಅಂತಿಮವಾಗಿ ಸೇವೆ ಸಲ್ಲಿಸುವವರೆಗಿನ ಅನುಭವಗಳು, ಹೋರಾಟಗಳು ಮತ್ತು ಸಾಧನೆಗಳನ್ನು ಗುರುತಿಸುತ್ತದೆ ಎಂದು ನರೇಂದ್ರ ಮೋದಿ ಹೇಳಿದ್ದಾರೆ

## ಸಾಲು ಸಾಲು ಅಕ್ರಮ ಆರೋಪ: ಕೆಪಿಎಸ್‌ಸಿಗೆ ಮೇಜರ್ ಸರ್ಜರಿ!

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ಇತ್ತೀಚಿನ ನೇಮಕಾತಿ ಪ್ರಕ್ರಿಯೆಯಲ್ಲಿ ಸಾಕಷ್ಟು ಅಕ್ರಮ ನಡೆದಿದೆ ಎಂಬ ಆರೋಪಗಳು ಕೇಳಿ ಬಂದಿವೆ. ಈ ಅಕ್ರಮಗಳ ವಿರುದ್ಧ ರಾಜ್ಯದಲ್ಲಿ ಉದ್ಯೋಗಾಕಾಂಕ್ಷಿಗಳು ಉಗ್ರ ಹೋರಾಟ ಕೂಡ ಮಾಡಿದ್ದರು. ಹೀಗೆ ಸಾಲು ಸಾಲು ಅಕ್ರಮ ಆರೋಪಗಳ ಬೆನ್ನಲ್ಲೇ ಇದೀಗ ಸರ್ಕಾರ ಕೆಪಿಎಸ್‌ಸಿಗೆ ಮೇಜರ್ ಸರ್ಜರಿ ಮಾಡಲಾಗಿದ್ದು, ಅಧಿಕಾರಿಗಳ ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳು ಕೇಳಿಬಂದ ಬೆನ್ನಲ್ಲೇ ರಾಜ್ಯ ಸರ್ಕಾರ ಪ್ರಮುಖ ಅಧಿಕಾರಿಗಳ ಎತ್ತಂಗಡಿಗೆ ಆದೇಶಿಸಿದ್ದು, ಕೆಪಿಎಸ್‌ಸಿಗೆ ಇಬ್ಬರು ಐಎಎಸ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಈ ಮುಂಚೆ ಪರೀಕ್ಷಾ ನಿಯಂತ್ರಣ ಅಧಿಕಾರಿಯಾಗಿದ್ದ ದಿಗ್ವಿಜಯ್ ಬೋಡ್ಕೆ ಅವರನ್ನು ಯಾವುದೇ ಪರ್ಯಾಯ ಜಾಗ ತೋರಿಸದೆ ಸರ್ಕಾರ ವರ್ಗಾವಣೆಗೊಳಿಸಿದೆ.

ತೆರವಾದ ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕ ಹುದ್ದೆಗೆ ಪ್ರಸ್ತುತ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕರಾಗಿರುವ ಹೆಚ್. ಪ್ರಸನ್ನ ಅವರಿಗೆ ಹೆಚ್ಚುವರಿ ಜವಾಬ್ದಾರಿ ನೀಡಿ ಸರ್ಕಾರ ಆದೇಶ ಹೊರಡಿಸಿದೆ. ಇನ್ನು ಕೆಪಿಎಸ್‌ಸಿ ಜಂಟಿ ಪರೀಕ್ಷಾ ನಿಯಂತ್ರಕರಾಗಿ ಐಎಎಸ್ ಅಧಿಕಾರಿ ಲವೀಶ್ ಓರ್ಡಿಯಾ ಅವರನ್ನು ನೇಮಕ ಮಾಡಲಾಗಿದೆ.

# ಇಂದಿನಿದ ವಿಧಾನಮಂಡಲ ಅಧಿವೇಶನ : ಆಡಳಿತ-ಪ್ರತಿಪಕ್ಷಗಳ ವಾಕ್ಸಮರಕ್ಕೆ ವೇದಿಕೆ ಸಿದ್ಧ

• ಉದಯವಾಹಿನಿ, ನವದೆಹಲಿ

**ಇಂದಿನಿಂದ** ಆರಂಭವಾಗಲಿರುವ ವಿಧಾನಮಂಡಲದ ಮುಂಗಾರು ಅಧಿವೇಶನ ಮುಖ್ಯಮಂತ್ರಿಯಾದ ನಂತರ ಡಿ.ಕೆ. ಶಿವಕುಮಾರ್ ಅವರಿಗೆ ಚೊಚ್ಚಲ ಅಧಿವೇಶನವಾಗಲಿದ್ದು, ಮುಖ್ಯಮಂತ್ರಿಯಾಗಿರುವ ಅವರ ಆಡಳಿತ ಸಾಮರ್ಥ್ಯಕ್ಕೆ ಅಧಿವೇಶನ ಒರೆಗಲ್ಲಾಗಲಿದೆ. ಸದನವನ್ನು ಯಾವ ರೀತಿ ನಿಭಾಯಿಸುತ್ತಾರೆ, ಸುಗಮ ಕಲಾಪಕ್ಕೆ ಏನೆಲ್ಲಾ ನೀತಿ ನಿಲುವುಗಳನ್ನು ಕೈಗೊಳ್ಳಲಿದ್ದಾರೆ ಎಂಬುದರತ್ತ ಎಲ್ಲರ ಚಿತ್ತ ನೆಟ್ಟಿದೆ. ಮುಖ್ಯಮಂತ್ರಿ ಹುದ್ದೆಯಿಂದ ಸಿದ್ದರಾಮಯ್ಯ ಅವರು ನಿರ್ಗಮಿಸಿದ ನಂತರ ರಾಜ್ಯ ರಾಜಕಾರಣದಲ್ಲಿನ ಬೆಳವಣಿಗೆಗಳು, ಸಚಿವ ಸಂಪುಟ ವಿಸ್ತರಣೆಯ ಬಳಿಕ ಅಸಮಾಧಾನದ ಕುದಿ ಸೇರಿದಂತೆ ಕಾಂಗ್ರೆಸ್‌ನ ಆಂತರಿಕ ರಾಜಕೀಯ ಬೆಳವಣಿಗೆಗಳ ನಡುವೆಯೇ ಇಂದಿನಿಂದ ವಿಧಾನಮಂಡಲದ ಮುಂಗಾರು ಅಧಿವೇಶನ ಆರಂಭವಾಗುತ್ತಿದ್ದು, ಪ್ರತಿಪಕ್ಷಗಳು ಸರ್ಕಾರದ ವೈಫಲ್ಯಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಮುಗಿಬೀಳಲು ಸರ್ವಸನ್ನದ್ಧವಾಗಿ ನಿಂತಿವೆ. ಪಕ್ಷದೊಳಗಿನ ಆಂತರಿಕ ಗೊಂದಲ, ವಿಪಕ್ಷಗಳ ವಾಗ್ದಾಳಿ ಎಲ್ಲವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಗೆ ನಿಭಾಯಿಸುತ್ತಾರೆ, ಸುಗಮವಾಗಿ ಸದನ ಕಲಾಪಗಳು ನಡೆಯಲು ಏನೆಲ್ಲಾ ರಾಜಕೀಯ ದಾಳಗಳನ್ನು ಉರುಳಿಸಿದ್ದಾರೆ ಎಂಬುದು ಕುತೂಹಲ ಮೂಡಿಸಿದೆ.



ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ನಂತರ ಡಿ.ಕೆ. ಶಿವಕುಮಾರ್ ಅವರು ರಾಜಕೀಯವಾಗಿ ಹಲವು ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅದರಲ್ಲೂ ಸಚಿವ ಸಂಪುಟ ವಿಸ್ತರಣೆ ನಂತರ ಕಾಂಗ್ರೆಸ್‌ನಲ್ಲಿ ಭುಗಿಲೆದ್ದಿರುವ ಅಸಮಾಧಾನ ಸಂಪೂರ್ಣ ಶಮನಗೊಂಡಿಲ್ಲ. ಸಚಿವ ಸ್ಥಾನ ಸಿಗದ ಶಾಸಕರು ಸದನದಲ್ಲಿ ಯಾವ ರೀತಿ ನಡೆದುಕೊಳ್ಳಲಿದ್ದಾರೆ, ಸದನದಲ್ಲೂ ಕಾಂಗ್ರೆಸ್ ಒಳಗಿನ ಆಂತರಿಕ ಜಗಳ, ಮುನಿಸು ಅನಾವರಣಗೊಳ್ಳಲಿದೆಯೇ ಎಂಬುದು ಎಲ್ಲರ ಕುತೂಹಲಕ್ಕೆ ಕಾರಣವಾಗಿದೆ.

ಬಿಡದಿ ಉಪನಗರ ಯೋಜನೆ ವಿಚಾರದಲ್ಲಿ ರೈತರಿಗೆ ಬೆಂಬಲ ವ್ಯಕ್ತಪಡಿಸಿ ಪ್ರತಿಭಟಿಸುತ್ತಿರುವ ವಿರೋಧ ಪಕ್ಷಗಳು ಪ್ರಮುಖವಾಗಿ ಈ ವಿಷಯ ಪ್ರಸ್ತಾಪಿಸಲಿವೆ. ಈ ವಿಚಾರದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಗ್ವಾದ ಕಾವೇರಿದ ದನಿಯಲ್ಲಿ ನಡೆಯುವ ಸಾಧ್ಯತೆಗಳು ಹೆಚ್ಚಾಗಿವೆ. ಸಂಕಷ್ಟ ಪರಿಸ್ಥಿತಿಯಲ್ಲೂ ತಮಿಳುನಾಡಿಗೆ ಕಾವೇರಿ ನದಿಯಿಂದ ನೀರು ಬಿಡಲು ಆದೇಶ ನೀಡಿರುವ ವಿಚಾರವೂ ಪ್ರತಿಧ್ವನಿಸಲಿದ್ದು, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹ ಕೇಳಿಬರಲಿದೆ.ಅಲ್ಲದೆ, ಸಂಪುಟ ವಿಸ್ತರಣೆ ಬೆನ್ನಲ್ಲೆ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಅಸಮಾಧಾನ, ಖಾತೆ ಹಂಚಿಕೆ ವಿಳಂಬದ ವಿಚಾರವೂ ಸಂದರ್ಭೋಚಿತವಾಗಿ ಪ್ರಸ್ತಾಪವಾಗುವ ಸಾಧ್ಯತೆಗಳು ಹೆಚ್ಚಾಗಿವೆ. ಗ್ಯಾರಂಟಿ ಸವಲತ್ತುಗಳು ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪದಿರುವುದು, ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡದ ಆರೋಪ, ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಸೇರಿಂತೆ ನಾಡು ಎದುರಿಸುತ್ತಿರುವ ಹತ್ತು ಹಲವು ಜ್ವಲಂತ ಸಮಸ್ಯೆಗಳ ಮೇಲೆ ಶಾಸಕರು ಬೆಳಕು ಚೆಲ್ಲಿ ಸರ್ಕಾರದಿಂದ ಸೂಕ್ತ ಉತ್ತರ ಪಡೆಯುವ ಸಾಧ್ಯತೆಗಳಿವೆ.ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾದ ಬಳಿಕ ಮೊದಲ ಅಧಿವೇಶನ ಇದಾಗಿದೆ. ಸಿದ್ಧರಾಮಯ್ಯ ಅವರು ಎರಡನೇ ಬಾರಿಗೆ ಮಾಜಿ ಮುಖ್ಯಮಂತ್ರಿಯಾದ ಬಳಿಕ ನಡೆಯುತ್ತಿರುವ ಮೊದಲ ಅಧಿವೇಶನವಾಗಿದೆ. ಹಾಗೆಯೇ ಶಾಸಕರಾಗಿದ್ದ ಕೆಲವರು ಸಚಿವರಾಗಿದ್ದಾರೆ. ಸಚಿವರಾಗಿದ್ದ ಕೆಲವರು ಮಾಜಿ ಸಚಿವರಾಗಿದ್ದಾರೆ. ಹೀಗಾಗಿ ಅವರ ಸ್ಥಾನಗಳು ಬದಲಾಗಿರುವುದರಿಂದ ಅಧಿವೇಶನ ತೀವ್ರ ಕುತೂಹಲ ಮೂಡಿಸಿದೆ.

## ಶುಭ ಮಹೂರ್ತ

ಮುಖ್ಯಮಂತ್ರಿಯಾಗಿ ಮೊದಲ ವಿಧಾನಮಂಡಲದ ಅಧಿವೇಶನದಲ್ಲಿ ಭಾಗಿಯಾಗುತ್ತಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ಚೊಚ್ಚಲ ಅಧಿವೇಶನವನ್ನು ಶುಭಘಳಿಗೆಯಲ್ಲೇ ನಡೆಸುತ್ತಿದ್ದು ಆಷಾಡ ಮುಗಿದು ಇಂದಿನಿಂದ ಶ್ರಾವಣಮಾಸ ಆರಂಭವಾಗಲಿದೆ. ಶ್ರಾವಣದ ಮೊದಲ ದಿನವೇ ಅಧಿವೇಶನ ಆರಂಭವಾಗಲಿದೆ. ಪ್ರತಿಯೊಂದು ಕಾರ್ಯಕ್ಕೂ ಶುಭ ಘಳಿಗೆ ಶುಭ ಮುಹೂರ್ತ ನೋಡುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ವಿಧಾನಮಂಡಲದ ಅಧಿವೇಶನಕ್ಕೂ ಶುಭ ದಿನ, ಘಳಿಗೆ ನೋಡಿಯೇ ನಿಗದಿ ಮಾಡಿದ್ದಾರೆ. ಸಾಮಾನ್ಯವಾಗಿ ವಿಧಾನಮಂಡಲದ ಅಧಿವೇಶನ ವಾರದ ಮೊದಲ ದಿನ ಅಂದರೆ ಸೋಮವಾರ ಆರಂಭವಾಗುತ್ತದೆ. ಈ ಬಾರಿ ಶ್ರಾವಣ ಮಾಸದ ಶುಭ ದಿನ ಗುರುವಾರ ಅಧಿವೇಶನ ಆರಂಭವಾಗುತ್ತಿದೆ. ವಿಧಾನಮಂಡಲದ ಅಧಿವೇಶನದಲ್ಲಿ ಇದೇ ಮೊದಲ ಬಾರಿಗೆ ವಿಧಾನಪರಿಷತ್ ಮತ್ತು ವಿಧಾನಸಭೆ ಎರಡಲ್ಲೂ ಹಂಗಾಮಿ ಸಭಾಪತಿ ಹಂಗಾಮಿ ಸಭಾಧ್ಯಕ್ಷರು ಕಾರ್ಯನಿರ್ವಹಿಸಲಿದ್ದಾರೆ.

ವಿಧಾನಪರಿಷತ್‌ನ ಸಭಾಪತಿ ಸ್ಥಾನಕ್ಕೆ ಬಸವರಾಜಹೊರಟ್ಟಿ ಅವರು ರಾಜೀನಾಮೆ ನೀಡಿದ್ದರು ಹಾಗೆಯೇ ಉಪಾಧ್ಯಕ್ಷರಾಗಿದ್ದ ಎಂ.ಕೆ. ಪ್ರಾಣೇಶ್ ಸಹ ರಾಜೀನಾಮೆ ನೀಡಿದ್ದರು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 15,486 /Gram 24ct ₹ 14,195/Gram 22ct ಬೆಳ್ಳಿ: ₹255.00/

## ಕರ್ನಾಟಕ ಬಂದ್‌ಗೆ ನಮ್ಮ ಬೆಂಬಲ ಇಲ್ಲ, ವಾಟಾಳ್ ನಾಗರಾಜ್ ತಮ್ಮ ನಿರ್ಧಾರದಿಂದ ಹಿಂದೆ ಸರಿಯಲಿ

• ಉದಯವಾಹಿನಿ, ಬೆಂಗಳೂರು

ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಅವರು ನಾಳೆ ಆಗಸ್ಟ್ 13ರಂದು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ನಮ್ಮ ಬೆಂಬಲ ಇಲ್ಲ ಎಂದು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣ ತಿಳಿಸಿದೆ.

ತಮಿಳುನಾಡಿಗೆ ಕರ್ನಾಟಕ ಕಾವೇರಿ ನದಿ ನೀರು ಹರಿಸುವುದನ್ನು ವಿರೋಧಿಸಿ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ವಿವಿಧ ಕನ್ನಡಪರ ಸಂಘಟನೆಗಳು ನಾಳೆ ಆಗಸ್ಟ್ 13ರಂದು ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಕರೆ ನೀಡಲಾಗಿರುವ ಬಂದ್ ಮುಂದುವರಿಸುವ ವಿಚಾರದಲ್ಲಿ ವಿವಿಧ ಸಂಘಟನೆಗಳ ನಡುವೆ ಭಿನ್ನಾಭಿಪ್ರಾಯಗಳು ಮೂಡಿವೆ ಎಂಬ ವರದಿಗಳ ನಡುವೆಯೇ ಅವರು ಈ ಹೇಳಿಕೆ ನೀಡಿದ್ದಾರೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಬಂದ್ ಆಚರಿಸುವುದು ಸೂಕ್ತವಲ್ಲ ಎಂಬ ಅಭಿಪ್ರಾಯವನ್ನು ಹಲವು ಕನ್ನಡಪರ ಸಂಘಟನೆಗಳು ಹಾಗೂ ಹೋರಾಟಗಾರರು ವ್ಯಕ್ತಪಡಿಸಿದ್ದಾರೆ.


ಉದಯವಾಹಿನಿ ಚಿತ್ರ

ಆದರೆ, ಬಂದ್‌ಗೆ ರಾಜ್ಯಾದ್ಯಂತ ವ್ಯಾಪಕ ಬೆಂಬಲ ವ್ಯಕ್ತವಾಗಿದೆ ಎಂದು ವಾಟಾಳ್ ನಾಗರಾಜ್ ಹೇಳಿದ್ದಾರೆ. ಜುಲೈ 31ರಂದು ಕನ್ನಡಪರ ಸಂಘಟನೆಗಳು ರಾಜ್ಯಾದ್ಯಂತ ಬಂದ್‌ಗೆ ಕರೆ ನೀಡಿದ್ದವು. ಬೆಂಗಳೂರಿನಲ್ಲಿ ವಾಟಾಳ್ ನಾಗರಾಜ್ ಅವರ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ನಡೆಸಿದ ಸಭೆಯ ಬಳಿಕ ಅವರು ಬಂದ್ ಘೋಷಣೆ ಮಾಡಿದ್ದರು.

## ನಟ ಪ್ರಕಾಶ್ ರಾಜ್ ಹೆಸರು ಮತದಾರರ ಪಟ್ಟಿಯಿಂದ ಅಳಿಸಿಲ್ಲ; 'ಶಿಫ್ಟೆಡ್' ಎಂದು ಗುರುತಿಸಲಾಗಿದೆ

• ಉದಯವಾಹಿನಿ, ಬೆಂಗಳೂರು

ನಟ ಪ್ರಕಾಶ್ ರಾಜ್ ಅವರ ಹೆಸರು ಶಾಂತಿನಗರ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಇನ್ನೂ ನೋಂದಣಿಯಲ್ಲಿದ್ದು, ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಡಿ ಅವರ ಹೆಸರನ್ನು ಅಳಿಸಲಾಗಿಲ್ಲ ಎಂದು ಬೆಂಗಳೂರು ಕೇಂದ್ರ ನಗರ ಪಾಲಿಕೆ ಸ್ಪಷ್ಟಪಡಿಸಿದೆ. ಪಾಲಿಕೆ ಬಿಡುಗಡೆ ಮಾಡಿರುವ ಪ್ರಕಟಣೆಯ ಪ್ರಕಾರ, ಚಟುವಟಿಕೆಗಳಿಗಾಗಿ ಮತದಾರರ ಪಟ್ಟಿಯ ದತ್ತಾಂಶವನ್ನು ಅಂತಿಮಗೊಳಿಸಿದ 2026ರ ಜೂನ್ 16ರಂದು, 163ನೇ ಶಾಂತಿನಗರ ವಿಧಾನಸಭಾ ಕ್ಷೇತ್ರದ ಭಾಗ ಸಂಖ್ಯೆ 1ರಲ್ಲಿ ಕ್ರಮಸಂಖ್ಯೆ 970ರಲ್ಲಿ ಪ್ರಕಾಶ್ ರಾಜ್ ಅವರ ಹೆಸರು ಸಕ್ರಿಯವಾಗಿ ನೋಂದಣಿಯಾಗಿತ್ತು. ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಾಶ್ ರಾಜ್ ಅವರ ವಿಡಿಯೊವೊಂದು ವೈರಲ್ ಆಗಿತ್ತು. ಬೆಂಗಳೂರಿನಲ್ಲಿ ಹುಟ್ಟಿ ಬೆಳೆದಿದ್ದರೂ ಪ್ರಕ್ರಿಯೆ ವೇಳೆ ತಮ್ಮ ಹೆಸರನ್ನು ಮತದಾರರ ಪಟ್ಟಿಯಿಂದ ಅಳಿಸಲಾಗಿದೆ ಎಂದು ಅವರು ಆರೋಪಿಸಿದ್ದರು. ಸಂಬಂಧಪಟ್ಟ ಮತಗಟ್ಟೆ ವ್ಯಾಪ್ತಿಯಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿ ಮನೆ-ಮನೆ ಪರಿಶೀಲನೆ ನಡೆಸಿದಾಗ, ಪ್ರಕಾಶ್ ರಾಜ್ ಅವರು ಗಾರ್ಡನ್ ಅಪಾರ್ಟ್‌ಮೆಂಟ್‌ನ 266ನೇ ಸಂಖ್ಯೆಯ ಮನೆಯಲ್ಲಿ ನೋಂದಾಯಿತ ವಿಳಾಸದಿಂದ ಶಾಶ್ವತವಾಗಿ ಸ್ಥಳಾಂತರಗೊಂಡಿರುವುದು ಪತ್ತೆಯಾಗಿದೆ ಎಂದು ಪಾಲಿಕೆ ತಿಳಿಸಿದೆ.


ಉದಯವಾಹಿನಿ ಚಿತ್ರ

ಅವರು ನೆರೆಹೊರೆಯವರು ಹಾಗೂ ಆಸ್ತಿಯ ವ್ಯವಸ್ಥಾಪಕರೊಂದಿಗೆ ಅಧಿಕೃತ ವಿಚಾರಣೆ ನಡೆಸಿದ್ದರು. ಫ್ಲ್ಯಾಟ್‌ನ ಮಾಲೀಕರೂ ದೂರವಾಣಿ ಮೂಲಕ ಮಾಹಿತಿ ನೀಡಿ, ಪ್ರಕಾಶ್ ರಾಜ್ ಅವರು ಕಳೆದ ನಾಲ್ಕು ವರ್ಷಗಳಿಂದ ಆ ಮನೆಯಲ್ಲಿ ವಾಸಿಸುತ್ತಿಲ್ಲ ಹಾಗೂ ಪ್ರಸ್ತುತ ಬೇರೆ ಬಾಡಿಗೆದಾರರು ಅಲ್ಲಿ ವಾಸಿಸುತ್ತಿದ್ದಾರೆ ಎಂದು ದೃಢಪಡಿಸಿದ್ದರು.

## ಆ.16 ರಿಂದ 18ರವರೆಗೆ ಸಾರ್ವಜನಿಕ ವೀಕ್ಷಣೆಗಾಗಿ ಲೋಕ ಭವನ ಮುಕ್ತ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕ ಭವನವು ಆಗಸ್ಟ್ 16 ರಿಂದ 18ರವರೆಗೆ ಸಾರ್ವಜನಿಕರ ವೀಕ್ಷಣೆಗಾಗಿ ತೆರೆದಿರಲಿದೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ.

ನಿಗದಿತ ಪ್ರದೇಶಗಳಿಗೆ ಭೇಟಿ ನೀಡಲು ಸಾರ್ವಜನಿಕರಿಗೆ ಆಹ್ವಾನ ನೀಡಲಾಗಿದ್ದು, ಭೇಟಿಯ ಸಂದರ್ಭದಲ್ಲಿ ಸುರಕ್ಷತೆ, ಭದ್ರತೆ ಮತ್ತು ಸುಗಮ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ನೀಡಲಾದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕೋರಲಾಗಿದೆ ಎಂದು ಅವರು ಹೇಳಿದರು.

80ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ, 2026ರ ಆಗಸ್ಟ್ 16, 17 ಮತ್ತು 18 ರಂದು ಸಂಜೆ 5.30 ರಿಂದ 7.30ರವರೆಗೆ ಕರ್ನಾಟಕದ ಲೋಕ್ ಭವನ'ವು ಸಾರ್ವಜನಿಕರ ವೀಕ್ಷಣೆಗಾಗಿ ತೆರೆದಿರುತ್ತದೆ ಎಂದು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಾರ್ಗಸೂಚಿಗಳ ಪ್ರಕಾರ, ಪ್ರತಿಯೊಬ್ಬ ಸಂದರ್ಶಕರು ಆಧಾರ್ ಕಾರ್ಡ್‌ನಂತಹ ಸರ್ಕಾರದಿಂದ ನೀಡಲಾದ ಮಾನ್ಯ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹೊಂದಿರಬೇಕು ಮತ್ತು ಪರಿಶೀಲನೆಗಾಗಿ ಪ್ರವೇಶ ದ್ವಾರದಲ್ಲಿ ಭದ್ರತಾ ಸಿಬ್ಬಂದಿಗೆ ತೋರಿಸಬೇಕು.

ಲೋಕ ಭವನದ ಆವರಣವನ್ನು ಪ್ರವೇಶಿಸುವ ಮೊದಲು ಸಂದರ್ಶಕರು ಕಡ್ಡಾಯವಾಗಿ ಭದ್ರತಾ ತಪಾಸಣೆಗೆ ಒಳಗಾಗಬೇಕು ಮತ್ತು ಭದ್ರತಾ ಸಿಬ್ಬಂದಿ ನೀಡುವ ಸೂಚನೆಗಳನ್ನು ಪಾಲಿಸಬೇಕು. ಸಂದರ್ಶಕರಿಗೆ ನಿಗದಿತ ಮಾರ್ಗದ ಮೂಲಕ ನಿರ್ದಿಷ್ಟಪಡಿಸಿದ ಪ್ರದೇಶಗಳಿಗೆ ಮಾತ್ರ ಪ್ರವೇಶಿಸಲು ಅನುಮತಿ ನೀಡಲಾಗುವುದು.

## ಇಂದಿರಾ ಕ್ಯಾಂಟಿನ್‌ನಲ್ಲಿ ಇಲಿಗಳ ಪಾರುಪತ್ಯ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಆಹಾರ ನಿರ್ವಹಣೆ ಮತ್ತು ಸಂಗ್ರಹಣೆಯಲ್ಲಿ ನೈರ್ಮಲ್ಯ ಕೊರತೆಯನ್ನು ಪತ್ತೆಹಚ್ಚಿದ ಬಳಿಕ, ಕರ್ನಾಟಕ ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಇಲಾಖೆ ಅಧಿಕಾರಿಗಳು ಬೆಂಗಳೂರಿನಲ್ಲಿ ಕ್ವಿಕ್-ಕಾಮರ್ಸ್ ಸಂಸ್ಥೆಯಾದ ಝೆಪ್ಟೋಗೆ ಸೇರಿದ ಗೋದಾಮು ಹಾಗೂ ಇಂದಿರಾ ಕ್ಯಾಂಟೀನ್ ಒಂದನ್ನು ಮಂಗಳವಾರ ಸೀಲ್ ಮಾಡಿದ್ದಾರೆ.

ಹೊಸಕೋಟೆ ತಾಲ್ಲೂಕಿನ ನಿಪ್ಪಾನ್ ಎಕ್ಸ್‌ಪ್ರೆಸ್‌ನಲ್ಲಿರುವ ಝೆಪ್ಟೋ ಗೋದಾಮಿನಲ್ಲಿ ಕರ್ನಾಟಕ ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಇಲಾಖೆಯು ತಪಾಸಣೆ ನಡೆಸಿ, 2006ರ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಕಾಯ್ದೆ ಹಾಗೂ ಅದರ ಅಡಿಯಲ್ಲಿ ರೂಪಿಸಲಾದ ನಿಯಮಗಳ ಪ್ರಕಾರ ಗುಣಮಟ್ಟ, ಸುರಕ್ಷತೆ, ಸಂಗ್ರಹಣೆ, ಲೇಬಲಿಂಗ್ ಮತ್ತು ಆಹಾರ ನಿರ್ವಹಣಾ ಅಭ್ಯಾಸಗಳನ್ನು ತಪಾಸಣೆ ನಡೆಸಿತು.

ಅಶುದ್ಧ ಆಹಾರಗಳು, ಅನುಚಿತ ಲೇಬಲಿಂಗ್, ತಪ್ಪಾದ ಬ್ರ್ಯಾಂಡ್ ಬಳಕೆ ಹಾಗೂ ಆಹಾರ ನಿರ್ವಹಣೆ ಮತ್ತು ಸಂಗ್ರಹಣಾ ಅಭ್ಯಾಸಗಳಲ್ಲಿ ಉಲ್ಲಂಘನೆಗಳು ಕಂಡುಬಂದ ಕಾರಣ, ಅನ್ವಯವಾಗುವ ಬಂಧನೆಗಳ ಅನುಸಾರ ಗೋದಾಮನ್ನು ಸೀಲ್ ಮಾಡಲಾಗಿದೆ ಎಂದು ಇಲಾಖೆ ತಿಳಿಸಿದೆ. ಅಲ್ಲದೆ, ನೋಟಿಸ್ ಜಾರಿ ಮಾಡಲಾಗಿದ್ದು, ಮುಂದಿನ ಕಾನೂನು ಕ್ರಮಕ್ಕಾಗಿ ಸಂಬಂಧಪಟ್ಟ ನಿರ್ಣಯ ಅಧಿಕಾರಿಗೆ ವಿಷಯವನ್ನು ಶಿಫಾರಸು ಮಾಡಲಾಗಿದೆ. ಗೊಟ್ಟಿಗೆರೆ, ಸಿಂಗಸಂದ್ರ ಮತ್ತು ಲಿಂಗರಾಜಪುರದಲ್ಲಿರುವ ಮೂರು ಇಂದಿರಾ ಕ್ಯಾಂಟೀನ್ ಗಳಲ್ಲಿ ತಪಾಸಣೆ ನಡೆಸಲಾಗಿದೆ. ಈ ತಪಾಸಣೆಯಲ್ಲಿ ಲೇಬಲಿಂಗ್, ತಪ್ಪಾದ ಬ್ರ್ಯಾಂಡ್ ಬಳಕೆ ಮತ್ತು ನಿಯಮಗಳ ಇತರ ಉಲ್ಲಂಘನೆಗಳು ಕಂಡುಬಂದಿವೆ. ಗೊಟ್ಟಿಗೆರೆ ಕ್ಯಾಂಟೀನ್ ಸೀಲ್ ಮಾಡಲಾಗಿದ್ದು, ಮೂರು ಮಳಿಗೆಗಳಿಗೂ ನೋಟಿಸ್ ಜಾರಿ ಮಾಡಲಾಗಿದೆ ಮತ್ತು ಕಾನೂನು ಕ್ರಮಕ್ಕಾಗಿ ಪ್ರಕರಣಗಳನ್ನು ಶಿಫಾರಸು ಮಾಡಲಾಗಿದೆ. ಬೇಳೆಕಾಳುಗಳು, ಅರಿಶಿನ ಪುಡಿ, ಅಡುಗೆ ಎಣ್ಣೆ, ಬೆಲ್ಲ, ಉಪ್ಪು, ಸಕ್ಕರೆ ಮತ್ತು ತಯಾರಿಸಿದ ಆಹಾರದ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಪ್ರಯೋಗಾಲಯಗಳಿಗೆ ಕಳುಹಿಸಲಾಗಿದೆ.

## ಬಿಡದಿ ಟೌನ್‌ಶಿಪ್ ಯೋಜನೆಗೆ ಜಮೀನು ನೀಡಲು ಸಿದ್ಧರಿದ್ದೇವೆ, ಶೀಘ್ರ ಅಂತಿಮ ಅಧಿಸೂಚನೆ ಹೊರಡಿಸಿ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ದಕ್ಷಿಣ ಜಿಲ್ಲೆಯ ಉದ್ದೇಶಿತ ಬಿಡದಿ ಟೌನ್‌ಶಿಪ್ ಯೋಜನೆಯಿಂದ ಬಾಧಿತವಾಗಲಿರುವ ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮಗಳ ರೈತರ ನಿಯೋಗವು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ, ಯೋಜನೆಗಾಗಿ ತಮ್ಮ ಜಮೀನುಗಳನ್ನು ಬಿಟ್ಟುಕೊಡಲು ಸಿದ್ಧವಿದ್ದು, ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲು ಶೀಘ್ರವೇ ಅಂತಿಮ ಅಧಿಸೂಚನೆ ಹೊರಡಿಸುವಂತೆ ಮನವಿ ಮಾಡಿತು. ಆದರೆ, ಬಿಡದಿ ಸುತ್ತಮುತ್ತಲಿನ ಮತ್ತೊಂದು ವರ್ಗದ ರೈತರು ಯೋಜನೆಗಾಗಿ ಭೂಸ್ವಾಧೀನ ಮಾಡುವುದನ್ನು ವಿರೋಧಿಸುತ್ತಿದ್ದು, ನಮ್ಮ ಫಲವತ್ತಾದ ಕೃಷಿ ಭೂಮಿಯನ್ನು ಬಿಟ್ಟುಕೊಡುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ.

ಬಿಡದಿ ಸುತ್ತಮುತ್ತಲಿನ ರೈತರಿಗೆ ತಮ್ಮ ಜಮೀನುಗಳನ್ನು ಬಿಟ್ಟುಕೊಡಲು ಎರಡು ಆಯ್ಕೆಗಳನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೆಲ ದಿನಗಳ ಹಿಂದೆ ಮುಂದಿಟ್ಟಿದ್ದರು. ಎಕರೆಗೆ 3 ಕೋಟಿ ರೂಪಾಯಿ ಪರಿಹಾರ ಪಡೆಯುವುದು ಅಥವಾ ಅಭಿವೃದ್ಧಿಪಡಿಸಿದ ಭೂಮಿಯ ರೂಪದಲ್ಲಿ ಶೇ.50ರಷ್ಟು ಪ್ರದೇಶವನ್ನು ಮರಳಿ ಪಡೆಯುವುದು ಈ ಎರಡು ಆಯ್ಕೆಗಳಾಗಿದ್ದವು.

## ಅಭಿವೃದ್ಧಿ ವಿಚಾರದಲ್ಲಿ ಯಾವುದೇ ತಾರತಮ್ಯ ಮಾಡಲ್ಲ

• ಉದಯವಾಹಿನಿ, ಕೆಂಗೇರಿ

ಅಭಿವೃದ್ಧಿ ವಿಚಾರದಲ್ಲಿ ಯಾವುದೇ ತಾರತಮ್ಯ ಮಾಡುವುದಿಲ್ಲ ಇಡೀ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ಶಾಸಕ ಎಸ್.ಟಿ. ಸೋಮಶೇಖರ್ ತಿಳಿಸಿದ್ದಾರೆ. ಕ್ಷೇತ್ರದ ದೊಡ್ಡಬಿದರಕಲ್ಲು ವಾರ್ಡಿನ ಕಾಂಗ್ರೆಸ್ ಜಿಬಿಎ ಸಂಭಾವ್ಯ ಅಭ್ಯರ್ಥಿ ಪ್ರಸಾದ್ ಕುಮಾರ್ ಆರ್ ನೇತೃತ್ವದಲ್ಲಿ ಸಪ್ತಗಿರಿ ಬಡಾವಣೆಯಲ್ಲಿ ಆಯೋಜಿಸಿದ್ದ ಜನಸ್ಪಂದನದಲ್ಲಿ ಸಾರ್ವಜನಿಕ ಸಮಸ್ಯೆಗಳನ್ನು ಆಲಿಸಿ, ಅಹವಾಲು ಸ್ವೀಕರಿಸಿ ಮಾತನಾಡಿದರು. ದೊಡ್ಡಬಿದರಕಲ್ಲು ವಾರ್ಡ್ ಅಭಿವೃದ್ಧಿ ವಿಚಾರವಾಗಿ ಕೆಲವರು ಜಾಲತಾಣಗಳಲ್ಲಿ ವೃಥಾ ಅಪಪ್ರಚಾರದಲ್ಲಿ ತೊಡಗಿದ್ದಾರೆ ಕಿವಿಗೊಡಬೇಡಿ.

ಯಾವುದೇ ವಾರ್ಡ್ ಇಲ್ಲವೇ ನಿರ್ದಿಷ್ಟ ಪ್ರದೇಶಗಳಿಗೆ ಸೀಮಿತವಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿಲ್ಲ ಎಂದು ಸ್ಪಷ್ಟಪಡಿಸಿದರು.110 ಹಳ್ಳಿ ವ್ಯಾಪ್ತಿ ಪ್ರದೇಶಗಳಲ್ಲಿ ಕಾವೇರಿ ನೀರು ಪೂರೈಕೆ, ಒಳಚರಂಡಿ ಕಲ್ಪಿಸಲು ವಿಶೇಷ ಒತ್ತು ನೀಡಲಾಗಿದೆ. ಮಳೆ ಬಂದರೆ ಇಲ್ಲಿನ ಭವಾನಿನಗರ ಮುಳುಗಿ ಹೋಗುತ್ತಿತ್ತು.

# ಮಳೆ ಕೊರತೆ, ಬಿತ್ತನೆ ವೈಫಲ್ಯ: ರಾಜ್ಯದಲ್ಲಿ 50 ಲಕ್ಷ ಟನ್ ಆಹಾರ ಧಾನ್ಯ ನಷ್ಟದ ಭೀತಿ

### ಆಗಸ್ಟ್ ವರೆಗೆ ಮಳೆಯ ಕೊರತೆ ಮುಂದುವರಿದರೆ, ಉತ್ಪಾದನಾ ನಷ್ಟವು 75 ಲಕ್ಷ ಟನ್ ಆಹಾರ ಧಾನ್ಯಗಳವರೆಗೆ ಹೆಚ್ಚಾಗಬಹುದು

• ಉದಯವಾಹಿನಿ, ಬೆಂಗಳೂರು

ನೈಋತ್ಯ ಮಾನ್ಸೂನ್ ಬಿತ್ತನೆ ಅವಧಿಯ ಮೊದಲ ಎರಡು ತಿಂಗಳು ಮುಗಿದಿದ್ದು, ಮಳೆಯ ಕೊರತೆಯು ಕರ್ನಾಟಕದಾದ್ಯಂತ ಬಿತ್ತನೆಯ ಮೇಲೆ ತೀವ್ರ ಪರಿಣಾಮ ಬೀರಿದೆ.

ರಾಜ್ಯವು ಕನಿಷ್ಠ 50 ಲಕ್ಷ ಟನ್ ಆಹಾರ ಧಾನ್ಯ ಉತ್ಪಾದನೆಯ ಆರಂಭಿಕ ಅಂದಾಜು ನಷ್ಟವನ್ನು ಎದುರಿಸುತ್ತಿದೆ. ಈ ತಿಂಗಳೂ ಮಳೆಯ ಕೊರತೆ ಮುಂದುವರಿದರೆ, ಆಹಾರ ಉತ್ಪಾದನಾ ನಷ್ಟವು ಮತ್ತಷ್ಟು ಹೆಚ್ಚಾಗುತ್ತದೆ. ಕರ್ನಾಟಕವು ವಾರ್ಷಿಕ ಆಹಾರ ಧಾನ್ಯ ಉತ್ಪಾದನಾ ಗುರಿಯನ್ನು ಸುಮಾರು 150 ಲಕ್ಷ ಟನ್ ನಿಗದಿಪಡಿಸಿದೆ ಎಂದು ಅಧಿಕಾರಿಗಳು ಮತ್ತು ಕೃಷಿ ತಜ್ಞರು ಹೇಳಿದ್ದಾರೆ. ಆದರೆ ಆಗಸ್ಟ್ ಮೊದಲ ವಾರದ ಹೊತ್ತಿಗೆ, ಕಳಪೆ ಮಾನ್ಸೂನ್ ಕಾರಣದಿಂದಾಗಿ ಉತ್ಪಾದನೆಯು ಸುಮಾರು 50 ಲಕ್ಷ ಟನ್‌ಗಳಷ್ಟು ಕಡಿಮೆಯಾಗಬಹುದು ಎಂದು ಹೇಳಲಾಗಿದೆ.

ಮೆಕ್ಕೆಜೋಳ, ಹತ್ತಿ, ಜೋಳ ಮತ್ತು ರಾಗಿ ಮೇಲೆ ಪ್ರಮುಖವಾಗಿ ಪರಿಣಾಮ ಬೀರಲಿವೆ. ಎಲ್ ನಿನೋ ಪರಿಣಾಮವು ಜನವರಿ 2027 ರವರೆಗೆ ಮುಂದುವರಿಯುವ ನಿರೀಕ್ಷೆಯಿದೆ, ಇದು ಹೆಚ್ಚಿನ ಶಾಖದ ಅಲೆಗಳು ಮತ್ತು 2 ಡಿಗ್ರಿ ಸೆಲ್ಸಿಯಸ್ ವರೆಗೆ ತಾಪಮಾನ ಏರಿಕೆಗೆ ಕಾರಣವಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ.

ಎಲ್ ನಿನೋ ಆವಿಯಾಗುವಿಕೆಯನ್ನು ಹೆಚ್ಚಿಸುತ್ತದೆ ಮತ್ತು ಮಣ್ಣಿನ ತೇವಾಂಶವನ್ನು ಕಡಿಮೆ ಮಾಡಿ ಬರ ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸುತ್ತದೆ. ಬಂಗಾಳಕೊಲ್ಲಿಯಲ್ಲಿನ ಕುಸಿತ ಉಂಟಾಗುವುದರಿಂದ ಮುಂದಿನ ಒಂದು ಅಥವಾ ಎರಡು ತಿಂಗಳಲ್ಲಿ ಕರ್ನಾಟಕದಲ್ಲಿ ಮಳೆಯನ್ನು ತರಬಹುದು ಮತ್ತು ಅದು ಸ್ವಲ್ಪ ಮಟ್ಟಿಗೆ ಬೆಳೆ ಮಟ್ಟವನ್ನು ಸುಧಾರಿಸಬಹುದು ಎಂದು ಅವರು ಹೇಳಿದರು.

ಕೃಷ್ಣ ರಾಜ ಸಾಗರ (ಕೆಆರ್‌ಎಸ್) ಮತ್ತು ತುಂಗಭದ್ರಾ ಜಲಾಶಯಗಳಿಂದ ನೀರಾವರಿಗಾಗಿ ನೀರನ್ನು ಇನ್ನೂ ಬಿಡುಗಡೆ ಮಾಡಲಾಗಿಲ್ಲ. ಮಳೆಯ ಕೊರತೆ ಮತ್ತು ಬರ ಪರಿಸ್ಥಿತಿಗಳು ಕಂಡುಬರುತ್ತಿರುವುದರಿಂದ, ಕುಡಿಯುವ ನೀರಿಗಾಗಿ ಸಾಕಷ್ಟು ಸಂಗ್ರಹಿಸಿಕೊಳ್ಳುವುದು ಸರ್ಕಾರದ ಮೊದಲ ಆದ್ಯತೆಯಾಗಿದೆ ಎಂದು ಅವರು ಹೇಳಿದರು. ಸಾಮಾನ್ಯವಾಗಿ, ರಾಜ್ಯದ ಹೆಚ್ಚಿನ ಭಾಗಗಳಲ್ಲಿ ಜೂನ್ ಮತ್ತು ಜುಲೈ ವೇಳೆಗೆ ಭತ್ತ ಬಿತ್ತನೆ ಪೂರ್ಣಗೊಳ್ಳುತ್ತಿತ್ತು. ಆದರೆ ಈ ವರ್ಷ ಅದು ಆಗಿಲ್ಲ ಎಂದು ರೆಡ್ಡಿ ಹೇಳಿದರು. ಆವಿಯಾಗುವಿಕೆಯನ್ನು ಹೆಚ್ಚಿಸುತ್ತದೆ ಮತ್ತು ಮಣ್ಣಿನ ತೇವಾಂಶವನ್ನು ಕಡಿಮೆ ಮಾಡಿ ಬರ ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸುತ್ತದೆ.

ಭತ್ತಕ್ಕೆ ರಾಗಿಯಂತಹ ಬೆಳೆಗಳಿಗಿಂತ ಗಮನಾರ್ಹವಾಗಿ ಹೆಚ್ಚಿನ ನೀರು ಬೇಕಾಗುತ್ತದೆ. ಮೂರು ತಿಂಗಳ ಬೆಳೆ ಚಕ್ರದಲ್ಲಿ ಭತ್ತದ ಬೆಳೆಗೆ ಸುಮಾರು 1200 ರಿಂದ 1500 ಮಿ.ಮೀ ನೀರು ಬೇಕಾಗುತ್ತದೆ, ಆದರೆ ರಾಗಿಗೆ ಸುಮಾರು 300 ಮಿ.ಮೀ ನೀರು ಸಾಕಾಗುತ್ತದೆ ಎಂದು ಅವರು ವಿವರಿಸಿದರು. ರಾಜ್ಯವು ತೀವ್ರ ಬರಗಾಲ ಉಂಟಾಗುವ ಸಾಧ್ಯತೆಯಿದೆ ಎಂದು ಕೃಷಿ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ, ಇದು ಆಹಾರ ಧಾನ್ಯ ಉತ್ಪಾದನೆಯ ಮೇಲೆ ಗಮನಾರ್ಹ ಪರಿಣಾಮ ಬೀರುವ ಸಾಧ್ಯತೆಯಿದೆ. ಆಗಸ್ಟ್ ಅಂತ್ಯದ ವೇಳೆಗೆ ನಮಗೆ ಸ್ಪಷ್ಟ ಚಿತ್ರಣ ಸಿಗುತ್ತದೆ.


ಉದಯವಾಹಿನಿ ಚಿತ್ರ

> ಈ ವರ್ಷ ಕಡಿಮೆ ಮಳೆಯಿಂದಾಗಿ ಭತ್ತದ ಉತ್ಪಾದನೆಯ ಮೇಲೆ ತೀವ್ರ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ಹೇಳಿದರು. ಜೂನ್ ಮತ್ತು ಜುಲೈನಲ್ಲಿ ರಾಜ್ಯದ ಪ್ರಮುಖ ಜಲಾಶಯಗಳಿಗೆ ಒಳಹರಿವು ಕಡಿಮೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.
> -ನಿರ್ದೇಶಕ ಶ್ರೀನಿವಾಸ್ ರೆಡ್ಡಿ

**ಹೊಲಗಳಿಗೆ ಭೇಟಿ ನೀಡಿ** ಉತ್ಪಾದನಾ ನಷ್ಟವು ವಾರ್ಷಿಕ ಗುರಿಯಾದ 150 ಲಕ್ಷ ಟನ್ ಅಂದರೆ ಶೇ.60ರಷ್ಟು ದಾಟಬಹುದು ಎಂದು ನಾವು ನಿರೀಕ್ಷಿಸುತ್ತೇವೆ ಎಂದು ಅಧಿಕಾರಿ ಹೇಳಿದರು. ಕೃಷಿ ಸಚಿವರ ಅನುಪಸ್ಥಿತಿಯಲ್ಲಿ, ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಜಿಲ್ಲಾ ಉಸ್ತುವಾರಿ ಸಚಿವರು ಹೊಲಗಳಿಗೆ ಭೇಟಿ ನೀಡಿ ಬೆಳೆ ಹಾನಿಯ ಪ್ರಮಾಣವನ್ನು ನಿರ್ಣಯಿಸಲು ನಿರ್ದೇಶಿಸಿದ್ದಾರೆ.


> ಆರಂಭಿಕ ಅಂದಾಜಿನ ಪ್ರಕಾರ, ಉತ್ಪಾದನೆ ಗುರಿಯ ಸುಮಾರು ಶೇ, 30 ರಷ್ಟು ನಷ್ಟವಾಗಬಹುದು. ಆಗಸ್ಟ್ ವರೆಗೆ ಮಳೆಯ ಕೊರತೆ ಮುಂದುವರಿದರೆ, ಉತ್ಪಾದನಾ ನಷ್ಟವು 75 ಲಕ್ಷ ಟನ್ ಆಹಾರ ಧಾನ್ಯಗಳವರೆಗೆ ಹೆಚ್ಚಾಗಬಹುದು ಎಂದು ಹೇಳಿದರು.-ಸಲಹೆಗಾರ ಎ.ಬಿ. ಪಾಟೀಲ್ ಹೇಳಿದರು.

**ಕಳಪೆ ಮಾನ್ಸೂನ್ ಉತ್ಪಾದನೆಯು 50 ಲಕ್ಷ ಟನ್‌ಗಳಷ್ಟು ಕಡಿಮೆ**

# ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ಕುವೆಂಪು ಥೀಮ್ ಪಾರ್ಕ್ ಲೋಕಾರ್ಪಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್)ವು ತನ್ನ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ನಿರ್ಮಿಸಿರುವ ಕುವೆಂಪು ಥೀಮ್ ಪಾರ್ಕ್'ಅನ್ನು ಇಂಧನ ಮತ್ತು ಪ್ರಾವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವ ಸಿ.ಬಿ.ಕೃಷ್ಣಬೈರೇಗೌಡ ಅವರು ಉದ್ಘಾಟಿಸಿದರು. ಕೆಪಿಟಿಸಿಎಲ್ ತನ್ನ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ಹೆಚ್‌ಬಿಆರ್ ಬಡಾವಣೆಯಲ್ಲಿ ಈ ಥೀಮ್ ಪಾರ್ಕ್ ನಿರ್ಮಿಸಿದೆ. ಉದ್ಯಾನ ಉದ್ಘಾಟಿಸಿ ಮಾತನಾಡಿದ


ಉದಯವಾಹಿನಿ ಚಿತ್ರ

ಕ್ಷೇತ್ರದ ಶಾಸಕರೂ ಆಗಿರುವ ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್, ಹಸಿರು ಬೆಂಗಳೂರಿಗೆ ಈ ಥೀಮ್ ಪಾರ್ಕ್ ಅತ್ಯುತ್ತಮ ಕೊಡುಗೆಯಾಗಿದ್ದು, ಸ್ವಚ್ಛ ಮತ್ತು ಹಸಿರು ಬೆಂಗಳೂರು ನಿರ್ಮಾಣದ ಸರ್ಕಾರದ ಬದ್ಧತೆಗೆ ಸಾಕ್ಷಿಯಾಗಿದೆ, ಎಂದರು

ಕೆಪಿಟಿಸಿಎಲ್ ತನ್ನದೇ ಸ್ಥಳದಲ್ಲಿ ಸಿಎಸ್‌ಆರ್ ಅನುದಾನದಲ್ಲಿ ಈ ಸುಂದರ ಪಾರ್ಕ್ ನಿರ್ಮಿಸಿದೆ.

ಇದರಿಂದಾಗಿ ಹೆಚ್‌ಬಿಆರ್ ಬಡಾವಣೆಯಲ್ಲಿ ಕುರುಚಲು ಕಾಡಿನಂತೆ ಇದ್ದ ಸ್ಥಳ ಈಗ ಆಕರ್ಷಕ ತಾಣವಾಗಿದೆ. ಈ ಪಾರ್ಕ್ ನಿರ್ಮಾಣಕ್ಕೆ ಸಹಕಾರ ನೀಡಿದ ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ, ಈಗಿನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಇದನ್ನು ಸುಂದರವಾಗಿ ನಿರ್ಮಿಸಲು ನೆರವಾದ ಕೆಪಿಟಿಸಿಎಲ್ ಅಧಿಕಾರಿಗಳು, ಸಿಬ್ಬಂದಿಗೆ ಕ್ಷೇತ್ರದ ಜನತೆ ಹಾಗೂ ಸಮಗ್ರ ಬೆಂಗಳೂರು ನಾಗರಿಕರ ಪರವಾಗಿ ಧನ್ಯವಾದ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಮಾತನಾಡಿ, ಸರ್ವಜ್ಞನಗರ ಕ್ಷೇತ್ರದ ಶಾಸಕರೂ ಆಗಿರುವ ಸಚಿವರಾದ ಕೆ.ಜೆ.ಜಾರ್ಜ್ ಅವರು ತಮ್ಮ ಇಲಾಖೆಯನ್ನು ಯಶಸ್ವಿಯಾಗಿ ನಡೆಸುತ್ತಿರುವುದಲ್ಲದೆ, ಸುಂದರ ಬೆಂಗಳೂರು ನಿರ್ಮಾಣಕ್ಕೂ ಹೆಚ್ಚಿನ ಸಹಕಾರ ನೀಡುತ್ತಿದ್ದಾರೆ.

## ಪರಪ್ಪನ ಅಗ್ರಹಾರ ಜೈಲಿನಲ್ಲೂ ಪ್ರಜ್ವಲ್ ರೇವಣ್ಣ ಬಳಿ ಮೊಬೈಲ್, ಪೆನ್‌ಡ್ರೈವ್ ಪತ್ತೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕೇಂದ್ರ ಅಪರಾಧ ವಿಭಾಗದ(ಸಿಸಿಬಿ) ಪೊಲೀಸ್ ತಂಡ ಶನಿವಾರ ಪರಪ್ಪನ ಅಗ್ರಹಾರ ಜೈಲಿನ ಮೇಲೆ ಹಠಾತ್ ದಾಳಿ ನಡೆಸಿ, ಪರಿಶೀಲನೆ ನಡೆಸಿದ್ದು, ಈ ವೇಳೆ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಜೆಡಿ(ಎಸ್) ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಮತ್ತು ಇನ್ನೊಬ್ಬ ವಿಚಾರಣಾಧೀನ ಕೈದಿ ಬಳಿ ಮೊಬೈಲ್ ಫೋನ್ ಹಾಗೂ ಪೆನ್ ಡ್ರೈವ್ ಪತ್ತೆಯಾಗಿದೆ. ಸಿಸಿಬಿ ಪೊಲೀಸರು ಕೈದಿಗಳಿಂದ ಮೊಬೈಲ್ ಫೋನ್, ಚಾರ್ಜರ್, ಪೆನ್ ಡ್ರೈವ್ ಮತ್ತು ನೋಟ್‌ಬುಕ್ ಅನ್ನು ವಶಪಡಿಸಿಕೊಂಡಿದ್ದಾರೆ. ಮನೆ ಕೆಲಸದಾಕೆಯ ಮೇಲೆ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಶಿಕ್ಷೆ ಅನುಭವಿಸುತ್ತಿರುವ ಪ್ರಜ್ವಲ್ ರೇವಣ್ಣ ಹಾಗೂ ವಿಚಾರಣಾಧೀನ ಕೈದಿ ಪ್ರತಾಪ್ ರೈ ವಿರುದ್ಧ ಸಿಸಿಬಿ ಪೊಲೀಸರು ಬುಧವಾರ ಈ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.ಪ್ರಜ್ವಲ್ ರೇವಣ್ಣ ಸಹ, ತಮ್ಮ ಸಂಬಂಧಿಕರು ಮತ್ತು ವಕೀಲರನ್ನು ಸಂಪರ್ಕಿಸಲು ಪ್ರತಾಪ್ ರೈ ಅವರಿಂದ ಫೋನ್ ಪಡೆದು ಬಳಸಿರುವುದಾಗಿಯೂ ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಿಸಿಬಿಯ ಮಾದಕ ದ್ರವ್ಯ ನಿಯಂತ್ರಣ ಬ್ಯೂರೋದ ಪೊಲೀಸ್ ಇನ್ಸ್‌ಪೆಕ್ಟರ್ ಎಂ.ಎಲ್. ಸುಬ್ರಹ್ಮಣ್ಯ ಸ್ವಾಮಿ ಅವರು ನೀಡಿದ ದೂರಿನ ಪ್ರಕಾರ, ಅಧಿಕಾರಿಗಳು ಹೆಚ್ಚಿನ ಭದ್ರತೆಯ ಬ್ಯಾರಕ್‌ನಲ್ಲಿ ಶೋಧ ನಡೆಸಿದರು.

ಭದ್ರತಾ ವಿಭಾಗ 3ರ ಮೊದಲ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 4ರಲ್ಲಿ ಹುಡುಕಾಟದ ಸಮಯದಲ್ಲಿ, ತಿಳಿ-ನೀಲಿ ಬಣ್ಣದ ರೆಡ್‌ಮಿ 5 ಮೊಬೈಲ್ ಫೋನ್, ಬಿಳಿ ಚಾರ್ಜರ್, ನೀಲಿ ಪಾಕೆಟ್ ನೋಟ್‌ಬುಕ್ ಮತ್ತು ಕಪ್ಪು ಸ್ಯಾನ್‌ಡಿಸ್ಕ್ ಪೆನ್‌ಡ್ರೈವ್ ಅನ್ನು ಪತ್ತೆ ಮಾಡಿದ್ದಾರೆ.

> ಪೊಲೀಸರ ಪ್ರಕಾರ, ವಿಚಾರಣೆಯ ಸಮಯದಲ್ಲಿ, ನೋಟ್‌ಬುಕ್ ತನಗೆ ಸೇರಿದ್ದು ಎಂದು ಪ್ರಜ್ವಲ್ ಅಧಿಕಾರಿಗಳಿಗೆ ಹೇಳಿದ್ದಾನೆ. ಪ್ರತಾಪ್ ರೈ ಮೊಬೈಲ್ ಫೋನ್, ಚಾರ್ಜರ್ ಮತ್ತು ಪೆನ್ ಡ್ರೈವ್ ತನ್ನದು ಎಂದು ಹೇಳಿಕೊಂಡಿದ್ದಾನೆ. ತನ್ನ ಸಂಬಂಧಿಕರು ಮತ್ತು ವಕೀಲರನ್ನು ಸಂಪರ್ಕಿಸಲು ಈ ಫೋನ್ ಬಳಸುತ್ತಿದ್ದನೆಂದು ಹೇಳಿದ್ದಾನೆ.

## ಪ್ರಜ್ವಲ್ ರೇವಣ್ಣ ಕೇಸಿನ ಬಗ್ಗೆ ತನಿಖೆ: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ಇತ್ತೀಚಿನ ಭೇಟಿ ವೇಳೆ ಆಡಳಿತಾತ್ಮಕ ಲೋಪಗಳು ಕಂಡುಬಂದ ಹಿನ್ನೆಲೆಯಲ್ಲಿ ಪರಪ್ಪನ ಅಗ್ರಹಾರದಲ್ಲಿರುವ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಅನಿರೀಕ್ಷಿತ ದಾಳಿ ನಡೆಸಲು ತಾನು ಆದೇಶಿಸಿದ್ದಾಗಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬುಧವಾರ ತಿಳಿಸಿದ್ದಾರೆ. ರಾಜ್ಯದ ಇತರ ಕಾರಾಗೃಹಗಳಲ್ಲೂ ಇದೇ ರೀತಿಯ ತಪಾಸಣೆಗಳನ್ನು ನಡೆಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ. ಕಾರಾಗೃಹದ ಅಧಿಕಾರಿಗಳ ಪ್ರಕಾರ, ಮಾಜಿ ಸಂಸದ ಹಾಗೂ ಅತ್ಯಾಚಾರ ಪ್ರಕರಣದಲ್ಲಿ ಅಪರಾಧಿಯಾಗಿರುವ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ಮೊಮ್ಮಗ ಪ್ರಜ್ವಲ್ ರೇವಣ್ಣ ಅವರ ಬಳಿ ದಾಳಿ ವೇಳೆ ಸ್ಮಾರ್ಟ್‌ಫೋನ್ ಪತ್ತೆಯಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅನುಮತಿ ಪಡೆದ ಬಳಿಕ ಸುಮಾರು 100 ಮಂದಿ ಕೇಂದ್ರ ಅಪರಾಧ ವಿಭಾಗದ ಸಿಬ್ಬಂದಿಯನ್ನು ದಾಳಿಗೆ ನಿಯೋಜಿಸಲಾಗಿತ್ತು. ಈ ವೇಳೆ ಹಲವು ಲೋಪಗಳು ಪತ್ತೆಯಾಗಿವೆ ಎಂದು ಖರ್ಗೆ ಹೇಳಿದರು.


ಉದಯವಾಹಿನಿ ಚಿತ್ರ

ಕಾರಾಗೃಹದೊಳಗಿನ ನಿಯಮ ಉಲ್ಲಂಘನೆಗಳಿಗೆ ಸಹಕರಿಸಿದ ಶಂಕಿತ ಅಧಿಕಾರಿಗಳ ವಿರುದ್ಧ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು. ಸಿಸಿಬಿ ದಾಳಿ ಸ್ವಯಂಪ್ರೇರಿತವಾಗಿ ನಡೆದದ್ದಲ್ಲ; ನಾನು ಆದೇಶಿಸಿದ್ದೆ. ಯಾವುದೇ ಕಾರಾಗೃಹದಲ್ಲಿ ದಾಳಿ ನಡೆಸಬೇಕಾದರೆ ಗೃಹ ಸಚಿವರ ಆದೇಶ ಇರಬೇಕು ಎಂದು ಸುದ್ದಿಗಾರರಿಗೆ ತಿಳಿಸಿದರು. ಎರಡು-ಮೂರು ವಾರಗಳ ಹಿಂದೆ ತಾವು ಕಾರಾಗೃಹಕ್ಕೆ ಭೇಟಿ ನೀಡಿದ್ದಾಗ ಕೆಲವು ಲೋಪಗಳು ಕಂಡುಬಂದಿದ್ದವು. ಈ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದ ಬಳಿಕ ದಾಳಿ ನಡೆಸಲು ಮುಖ್ಯಮಂತ್ರಿಯವರ ಅನುಮತಿ ಪಡೆದಿದ್ದಾಗಿ ಹೇಳಿದರು.

ನಿಯಮ ಉಲ್ಲಂಘನೆಗಳಿಗೆ ಸಹಕರಿಸಿದ ಅಧಿಕಾರಿಗಳನ್ನು ಅಮಾನತುಗೊಳಿಸುವಂತೆ ತಾವು ಆದೇಶಿಸಿದ್ದಾಗಿ ಹೇಳಿದರು.

**ಈಗಾಗಲೇ ಕ್ರಮ** ಅಲ್ಲಿನ ವ್ಯವಸ್ಥೆ ಮತ್ತು ಸಿದ್ಧತೆಗಳ ಬಗ್ಗೆ ಪರಿಶೀಲಿಸಲು ಸುಮಾರು 100 ಸಿಸಿಬಿ ಸಿಬ್ಬಂದಿಯನ್ನು ಕಳುಹಿಸಿದ್ದೆವು. ಸಾಕಷ್ಟು ಲೋಪಗಳು ಪತ್ತೆಯಾಗಿವೆ. ಈಗಾಗಲೇ ಕ್ರಮವನ್ನೂ ಕೈಗೊಂಡಿದ್ದೇವೆ.

## ವಿಧಾನಸಭೆಗೆ ಆಗಸ್ಟ್ 14 ರಂದು ಹೊಸ ಸ್ಪೀಕರ್ ಆಯ್ಕೆ

• ಉದಯವಾಹಿನಿ, ಬೆಂಗಳೂರು

ವಿಧಾನಸಭೆಗೆ ಆಗಸ್ಟ್ 14 ರಂದು ಹೊಸ ಸ್ಪೀಕರ್ ಆಯ್ಕೆಯಾಗಲಿದ್ದಾರೆ. ಪ್ರಸ್ತುತ ಸ್ಪೀಕರ್ ಮತ್ತು ಉಪ ಸ್ಪೀಕರ್ ಹುದ್ದೆಗಳು ಖಾಲಿಯಾಗಿದ್ದು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಆಗಸ್ಟ್ 3 ರಂದು ಹಿರಿಯ ಕಾಂಗ್ರೆಸ್ ಶಾಸಕ ಟಿ ಬಿ ಜಯಚಂದ್ರ ಅವರನ್ನು ಹಂಗಾಮಿ ಸ್ಪೀಕರ್ ಆಗಿ ನೇಮಿಸಿದ್ದರು.

ವಿಧಾನಸಭೆಯಲ್ಲಿ ಕಾರ್ಯವಿಧಾನ ಮತ್ತು ವ್ಯವಹಾರ ನಡವಳಿಕೆಯ ನಿಯಮಗಳ ಉಪ-ನಿಯಮ 7(1) ರ ಅಡಿಯಲ್ಲಿ, ಗೌರವಾನ್ವಿತ ರಾಜ್ಯಪಾಲರು ಆಗಸ್ಟ್ 14, 2026, ಶುಕ್ರವಾರವನ್ನು ಸ್ಪೀಕರ್ ಚುನಾವಣೆಗೆ ದಿನಾಂಕವಾಗಿ ನಿಗದಿಪಡಿಸಿದ್ದಾರೆ ಎಂದು ಕರ್ನಾಟಕ ವಿಧಾನಸಭೆ ಬುಲೆಟಿನ್‌ನಲ್ಲಿ ತಿಳಿಸಿದೆ.

ಆಗಸ್ಟ್ 13, 2026ರ ಗುರುವಾರ ಮಧ್ಯಾಹ್ನ 12.00 ಗಂಟೆಯ ಮೊದಲು ಯಾವುದೇ ಸದಸ್ಯರು ಕಾರ್ಯದರ್ಶಿಗೆ ಲಿಖಿತವಾಗಿ ನೋಟಿಸ್ ನೀಡಬಹುದು, ಮತ್ತೊಬ್ಬ ಸದಸ್ಯರನ್ನು ಸ್ಪೀಕರ್ ಆಗಿ ಆಯ್ಕೆ ಮಾಡುವ ಪ್ರಸ್ತಾವನೆಯ ಬಗ್ಗೆ ಮತ್ತು ಆ ಸೂಚನೆಯನ್ನು ಮೂರನೇ ಸದಸ್ಯರು ಅನುಮೋದಿಸಬೇಕು ಮತ್ತು ನೋಟಿಸ್‌ನಲ್ಲಿ ಹೆಸರನ್ನು ಪ್ರಸ್ತಾಪಿಸಲಾದ ಸದಸ್ಯರು ಆಯ್ಕೆಯಾದರೆ ಅವರು ಸ್ಪೀಕರ್ ಆಗಿ ಸೇವೆ ಸಲ್ಲಿಸಲು ಸಿದ್ಧರಿದ್ದಾರೆ ಎಂದು ಹೇಳಿಕೆಯೊಂದಿಗೆ ಇರಬೇಕು. ಅಂತಹ ಸೂಚನೆಯನ್ನು ಅಭ್ಯರ್ಥಿ, ಪ್ರಸ್ತಾಪಕರು ಅಥವಾ ಅನುಮೋದಿಸಿದವರು ಕಾರ್ಯದರ್ಶಿಗೆ ಖುದ್ದಾಗಿ ತಲುಪಿಸಬೇಕು ಎಂದು ಬುಲೆಟಿನ್ ಹೇಳಿದೆ.

ನಾಗೇಂದ್ರ ರಾಜೀನಾಮೆ ನೀಡುವವರೆಗೆ ವಿಧಾನಸಭೆ ಕಲಾಪಕ್ಕೆ ಅವಕಾಶ ನೀಡಲ್ಲ ಸರ್ಕಾರಕ್ಕೆ ಖಡಕ್ ಎಚ್ಚರಿಕೆ ಜೂನ್ 3 ರಂದು ಯು ಟಿ ಖಾದರ್ ಅವರನ್ನು ಸಂಪುಟಕ್ಕೆ ಸೇರಿಸಿಕೊಂಡ ನಂತರ ಸ್ಪೀಕರ್ ಸ್ಥಾನ ತೆರವಾಗಿದೆ. ಉಪ ಸ್ಪೀಕರ್ ರುದ್ರಪ್ಪ ಲಮಾಣಿ ನಂತರ ಸ್ಪೀಕರ್ ಪಾತ್ರವನ್ನು ನಿರ್ವಹಿಸುತ್ತಿದ್ದರು.

# ಸರ್ಕಾರದಿಂದ ಮಹತ್ವದ ಆದೇಶ: ಕರ್ನಾಟಕದಲ್ಲಿ ಗುಟ್ಕಾ, ತಂಬಾಕು ಪಾನ್ ಮಸಾಲಾ ಬ್ಯಾನ್!

### ರಾಜ್ಯಾದ್ಯಂತ ಇಂತಹ ಉತ್ಪನ್ನಗಳ ತಯಾರಿಕೆ ಮತ್ತು ಮಾರಾಟಕ್ಕೆ ಒಂದು ವರ್ಷದ ಮಟ್ಟಿಗೆ ಸಂಪೂರ್ಣ ತಡೆ ಬೀಳಲಿದೆ

• ಉದಯವಾಹಿನಿ, ಬೆಂಗಳೂರು

ಆಹಾರ ಸುರಕ್ಷತೆ ಮತ್ತು ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಕರ್ನಾಟಕ ಸರ್ಕಾರ ಬುಧವಾರ ಮಹತ್ವದ ಆದೇಶ ಹೊರಡಿಸಿದ್ದು, ಪಾನ್ ಮಸಾಲಾ ಉತ್ಪನ್ನಗಳ ಮೇಲೆ ಒಂದು ವರ್ಷದ ನಿಷೇಧ ಹೇರಿದೆ. ರಾಜ್ಯಾದ್ಯಂತ ಗುಟ್ಕಾ ಹಾಗೂ ತಂಬಾಕು ಅಥವಾ ನಿಕೋಟಿನ್ ಒಳಗೊಂಡ ಪಾನ್ ಮಸಾಲಾ ಉತ್ಪನ್ನಗಳ ಮೇಲೆ ಒಂದು ವರ್ಷದ ನಿಷೇಧ ಹೇರಲಾಗಿದ್ದು, ಗುಟ್ಕಾ ಹಾಗೂ ತಂಬಾಕು ಅಥವಾ ನಿಕೋಟಿನ್ ಒಳಗೊಂಡ ಪಾನ್ ಮಸಾಲಾ ಉತ್ಪನ್ನಗಳ ತಯಾರಿಕೆ, ದಾಸ್ತಾನು, ವಿತರಣೆ, ಸಾಗಣೆ ಮತ್ತು ಮಾರಾಟವನ್ನು ಆಹಾರ ಸುರಕ್ಷತಾ ಆಯುಕ್ತರು ನಿಷೇಧಿಸಿದ್ದಾರೆ.

ಇದಲ್ಲದೆ, ಪಾನ್ ಮಸಾಲಾದೊಂದಿಗೆ ಮಿಶ್ರಣ ಮಾಡಲು ಅನುಕೂಲವಾಗುವಂತೆ ಪ್ರತ್ಯೇಕವಾಗಿ ಪ್ಯಾಕ್ ಮಾಡಿ ಮಾರಾಟ ಮಾಡುವ ತಂಬಾಕು ಉತ್ಪನ್ನಗಳಿಗೂ ಈ ನಿಷೇಧ ಅನ್ವಯವಾಗಲಿದೆ. ಈ ಕ್ರಮದಿಂದ ರಾಜ್ಯಾದ್ಯಂತ ಇಂತಹ ಉತ್ಪನ್ನಗಳ ತಯಾರಿಕೆ ಮತ್ತು ಮಾರಾಟಕ್ಕೆ ಒಂದು ವರ್ಷದ ಮಟ್ಟಿಗೆ ಸಂಪೂರ್ಣ ತಡೆ ಬೀಳಲಿದೆ. ಆದೇಶ ಉಲ್ಲಂಘಿಸುವ ತಯಾರಕರು, ವಿತರಕರು, ಚಿಲ್ಲರೆ ವ್ಯಾಪಾರಿಗಳು ಸೇರಿದಂತೆ ಸಂಬಂಧಪಟ್ಟವರ ವಿರುದ್ಧ ತಪಾಸಣೆ ನಡೆಸಿ ಕ್ರಮ ಕೈಗೊಳ್ಳಲು ಅಧಿಕಾರಿಗಳು ಮುಂದಾಗುವ ನಿರೀಕ್ಷೆಯಿದೆ.

ಗಂಭೀರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದಾದ ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ಬಳಕೆಯನ್ನು ನಿಯಂತ್ರಿಸುವ ಪ್ರಯತ್ನದ ಭಾಗವಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ.

''ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006ರ ಸೆಕ್ಷನ್ 30(2)(ಎ) ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ಮಾರಾಟದ ಮೇಲಿನ ನಿಷೇಧ ಮತ್ತು ನಿರ್ಬಂಧಗಳು) ನಿಯಮಾವಳಿ, 2011ರ ನಿಯಮ 2.3.4ರ ಅಡಿಯಲ್ಲಿ ನೀಡಲಾಗಿರುವ ಅಧಿಕಾರವನ್ನು ಚಲಾಯಿಸಿ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ 10-08-2026ರಂದು ಸರ್ಕಾರದ ಅಧಿಸೂಚನೆ ಹೊರಡಿಸಿದೆ'' ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತ ಕೆ. ಶ್ರೀನಿವಾಸ್ ಹೇಳಿಕೆಯಲ್ಲಿ ತಿಳಿಸಿದ್ದಾರೆ. ನಿಷೇಧಿತ ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ತಯಾರಿಕೆ, ಮಾರಾಟ ಅಥವಾ ವಿತರಣೆ ನಡೆಯುತ್ತಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಹಾಗೂ ಆರೋಗ್ಯಕರ ಮತ್ತು ವ್ಯಸನಮುಕ್ತ ಕರ್ನಾಟಕ ನಿರ್ಮಾಣಕ್ಕೆ ಸಹಕರಿಸುವಂತೆ ಇಲಾಖೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ. ಕರ್ನಾಟಕದಲ್ಲಿ ತಂಬಾಕು ಮತ್ತು/ಅಥವಾ ನಿಕೋಟಿನ್ ಹೊಂದಿರುವ ಉತ್ಪನ್ನಗಳ ಮಾರಾಟ ಹಾಗೂ ವಿತರಣೆಯನ್ನು ನಿಷೇಧಿಸಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಅಧಿಸೂಚನೆ ಹೊರಡಿಸಿದೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ. ''ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006ರ ಸೆಕ್ಷನ್ 30(2)(ಎ) ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ಮಾರಾಟದ ಮೇಲಿನ ನಿಷೇಧ ಮತ್ತು ನಿರ್ಬಂಧಗಳು) ನಿಯಮಾವಳಿ, 2011ರ ನಿಯಮ 2.3.4ರ ಅಡಿಯಲ್ಲಿ ನೀಡಲಾಗಿರುವ ಅಧಿಕಾರವನ್ನು ಚಲಾಯಿಸಿ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ 10-08-2026ರಂದು ಸರ್ಕಾರದ ಅಧಿಸೂಚನೆ ಹೊರಡಿಸಿದೆ ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತ ಕೆ. ಶ್ರೀನಿವಾಸ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

> ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತಾ ವಿಭಾಗವು ತಂಬಾಕು ಮತ್ತು/ಅಥವಾ ನಿಕೋಟಿನ್ ಹೊಂದಿರುವ ಉತ್ಪನ್ನಗಳ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.- ಆಯುಕ್ತ ಕೆ. ಶ್ರೀನಿವಾಸ್

**ಉತ್ಪನ್ನಗಳ ಮಾರಾಟ** ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಕರ್ನಾಟಕದಲ್ಲಿ ತಂಬಾಕು ಮತ್ತು ನಿಕೋಟಿನ್ ಹೊಂದಿರುವ ಉತ್ಪನ್ನಗಳ ಮಾರಾಟ ಹಾಗೂ ವಿತರಣೆಯನ್ನು ಈ ಅಧಿಸೂಚನೆಯ ಮೂಲಕ ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

